MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER · VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್ Cell : 9743497111

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ Cell : 9743496111

YUVA MARGA KANNADA DAILY NEWS PAPER

ಸಂಪುಟ: 04 | ಸಂಚಿಕೆ: 333 | ಭಾನುವಾರ : 26-10-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 333 | SUNDAY : 26-10-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00




# ಸಿಐಟಿಯು 8ನೇ ರಾಯಚೂರು ಜಿಲ್ಲಾ ಸಮ್ಮೇಳನ




**ಯುವ ಮಾರ್ಗ ಸುದ್ದಿ**

**ಮಾನ್ವಿ,ಅ.25–** ಪಟ್ಟಣದ ನ್ಯೂ ಫ್ರೆಂಡ್ಸ್ ಫಂಕ್ಷನ್ ಹಾಲ್ ನಲ್ಲಿ ರಾಯಚೂರು ಜಿಲ್ಲಾ ಮಟ್ಟದ ಸೆಂಟರ್ ಆಫ್. ಇಂಡಿ ಯಾನ್ ಟ್ರೇಡ್ ಯೂನಿಯನ್ಸ್ ಎಂಟನೇ ಸಮ್ಮೇಳನವನ್ನು ಗ್ರಾ.ಪಂ.ನೌ.ಸಂಘದ ರಾಜ್ಯ ಉಪಾಧ್ಯಕ್ಷರಾದ ಕಾಮ್ರೆಡ್ ಆರ್.ಎಸ್.ಬಸವರಾಜ್ ಉದ್ಘಾಟಿಸಿ ಮಾತನಾಡಿ, ಬ್ರೀಟಿಷರ ಕಾಲದ 'ಲ್ಲಿಯೇ ಕಾರ್ಮಿಕರ ರಕ್ಷಣೆಗಾಗಿ ಇದ್ದ 29 ಕಾರ್ಮಿಕ ಕಾನೂನುಗಳನ್ನು ಇಂದು ಕೇಂದ್ರ ಸರ್ಕಾರ 4 ಕೋಡ್‌ಗಳಗಿಸಿ ಜಾರಿ ಮಾಡುವುದಕ್ಕೆ ಮುಂದಾಗುವ ಮೂಲಕ ಕಾರ್ಮಿಕರ ಹಕ್ಕುಗಳನ್ನು ಕಸಿದು ಬೃಹತ್ ಸಂಸ್ಥೆಗಳಿಗೆ ಅನುಕೂಲ ಮಾಡಿಕೊಡುವುದಕ್ಕೆ ಮುಂದಾಗಿರುವುದು ಸರಿಯಲ್ಲ ದೇಶದಲ್ಲಿನ ದುಡಿಯುವ ವರ್ಗದ ಹಕ್ಕುಗಳ ರಕ್ಷಣೆಗಾಗಿ 1970 ರಲ್ಲಿ ಕಲ್ಕತದಲ್ಲಿ ಸೆಂಟರ್ ಆಫ್. ಇಂಡಿಯಾನ್ ಟ್ರೇಡ್ ಯೂನಿಯನ್ಸ್ ಪ್ರಾರಂಭವಾಗಿದ್ದು ಇದುವರೆಗೂ ದುಡಿಯುವ ಕಾರ್ಮಿಕರಿಗೆ ಉದ್ಯೋಗ ಭದ್ರತೆ ,ಕನಿಷ್ಟ ವೇತನ ದೊರೆಯಬೇಕು ಎನ್ನುವ ಕುರಿತು ಹೋರಾಟ ನಡೆಸಲಾಗುತ್ತಿದೆ. ದೇಶದ ದುಡಿಯುವ ಕೈಗಳಿಗೆ ಉದ್ಯೋಗ,ದುಡಿಮೆಗೆ ತಕ್ಕ ವೇತನವನ್ನು ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ನೀಡುವುದಕ್ಕೆ ಕ್ರಮ ಕೈಗೊಳ್ಳುತ್ತಿಲ್ಲ ಸರ್ಕಾರಗಳು ದುಡಿಯುವ ವರ್ಗದ ಜೋತೆ ಇರದೆ ಬಹುರಾಷ್ಟ್ರಿಯ ಕಂಪನಿಗಳ ಪರ ಇದ್ದವೆ ದುಡಿಯುವ ಸಮಯವನ್ನು 8ಗಂಟೆಯಿಂದ 12 ಗಂಟೆಗೆ ಹೆಚ್ಚಿಸಲಾಗುತ್ತಿದೆ. ದೇಶದಲ್ಲಿ ಐ.ಸಿ.ಡಿ.ಎಸ್.ಯೋಜನೆಯ ಖಾಸಗಿಕ 'ರಣ ಗೊಳಿಸುವ ಮೂಲಕ ಹಾಗೂ ಬಿಸಿಯೂಟವನ್ನು ಇಸ್ಕಾನ್ ಸಂಸ್ಥೆಗೆ ನೀಡುವ ಮೂಲಕ ಸ್ಕೀಂ ನೌಕರರಾದ ಅಂಗನವಾಡಿ.ಆಶಾ ಕಾರ್ಯಕರ್ತರು, ಬಿಸಿಯೂಟ ನೌಕರರ ಉದ್ಯೋಗವನ್ನು ಕಸಿಯಲಾಗುತ್ತಿದೆ. ದೇಶದಲ್ಲಿನ ಸರ್ಕಾರಿ ಉದ್ದಿಮೆಗಳನ್ನು ಹಾಗೂ ಸರ್ಕಾರಿ ಒಡೆತನದ 14 ಲಕ್ಷಕ್ಕೂ ಹೆಚ್ಚು ಕಾರ್ಖನೆಗಳನ್ನು, ಸಂಸ್ಥೆಗಳನ್ನು ಲಾಕ್ ಔಟ್ ಮಾಡುವುದಕ್ಕೆ ಮುಂದಾಗುತ್ತಿವೆ.ಜಿ.ಎಸ್.ಟಿ ಹೊರೆಯಿಂದ ಅನೇಕ ಸಂಸ್ಥೆಗಳು ಮುಚ್ಚುವ ಮೂಲಕ ಕಾರ್ಮಿಕ ಉದ್ಯೋಗವನ್ನು ಕಸಿಯುತ್ತಿರ್ವೇ ಎಂದು ತಿಳಿಸಿದರು.

ರಾಯಚೂರು ಜಿಲ್ಲಾ ಮಟ್ಟದ ಸೆಂಟರ್ ಆಫ್. ಇಂಡಿಯಾನ್ ಟ್ರೇಡ್ ಯೂನಿಯನ್ಸ್ ಎಂಟನೇ ಸಮ್ಮೇಳನದಲ್ಲಿ ಹಟ್ಟಿಗೋಲ್ಡ್ ಮೈನ್ಸ್ ಕಂಪನಿಯ ಕಾರ್ಮಿಕ ಚುನಾವಣೆಯಲ್ಲಿ ಸಿ.ಐ.ಟಿ.ಯು 13 ಸದಸ್ಯರು ಗೆಲುವು ಸಾಧಿಸಿದಂತೆ ಜಿಲ್ಲೆಯ ವಿವಿಧ ಕಾರ್ಖನೆಗಳ ಕಾರ್ಮಿಕ ಚುನಾವಣೆಯ ಲ್ಲಿಯು ಗೇಲವು ಸಾಧಿಸುವುದಕ್ಕೆ ಕಾರ್ಮಿಕರನ್ನು ಸಂಘಟಿಸಬೇಕು ,ಕಾರ್ಮಿಕರಿಗೆ ಮಾಸಿಕ 36 ಸಾವಿರ ಕನಿಷ್ಟ ವೇತನಕ್ಕಾಗಿ ಹೋರಾಟ ನಡೆಸುವ ಕುರಿತು, ನ.13.14,15 ರಂದು ಹಾಸನದಲ್ಲಿ ನಡೆಯುವ ರಾಜ್ಯ ಮಟ್ಟದ ಸಮೇಳನ ಹಾಗೂ ವಿಶಾಖ ಪಟ್ಟಣದಲ್ಲಿ ನಡೆಯುವ ರಾಷ್ಟ್ರ ಮಟ್ಟದ ಸಮೇಳನ ಹಾಗೂ ರಾಯಚೂರು ಜಿಲ್ಲೆಯಲ್ಲಿ ಮುಂದಿನ ಮೂರು ವರ್ಷಗಳ ಕಾಲ ಕೈಗೊಳ್ಳಬೇಕಾದ ಕಾರ್ಯ ಯೋಜನೆಯನ್ನು ಚರ್ಚೆನಡೆಸಲಾಯಿತು.

ಸಮ್ಮೇಳನದ ಅಧ್ಯಕ್ಷತೆಯನ್ನು ಸಿಐಟಿಯು ಜಿಲ್ಲಾ ಸಮಿತಿ ಅಧ್ಯಕ್ಷರಾದ ಕಾಮ್ರೆಡ್ ಎಚ್. ಪದ್ಮಾ ,ಜಿಲ್ಲಾ ಕಾರ್ಯದರ್ಶಿಗಳಾದ ಕಾಮ್ರೇಡ ಡಿ.ಎಸ್. ಶರಣಬಸವ, ಕರ್ನಾಟಕ ಪ್ರಾಂತ ರೈತ ಸಂಘದ ಜಿಲ್ಲಾ ಉಪಾಧ್ಯಕ್ಷರಾದ ಕಾಮ್ರೆಡ್ ಕೆ. ಜಿ.ವೀರೇಶ್, ಕಟ್ಟಡ ಕಾರ್ಮಿಕರ ಸಂಘದ ರಾಜ್ಯ ಜಂಟಿ ಕಾರ್ಯದರ್ಶಿ ಶಬೀರ್, ಜಿಲ್ಲಾ ಅಧ್ಯಕ್ಷರಾದ ಕಾಂ. ರುದ್ರಪ್ಪ ನಾಯಕ, ಗ್ರಾಮ ಪಂಚಾಯಿತಿ ನೌಕರ ಸಂಘದ ಜಿಲ್ಲಾ ಅಧ್ಯಕ್ಷರಾದ ಕಾಮ್ರೆಡ್ ಮಲ್ಲಿಕಾರ್ಜುನ ಮನಸಲಾಪುರ, ಸಿಐಟಿಯು ಜಿಲ್ಲಾ ಮುಖಂಡರಾದ ಕಾಂ.ಶಬ್ಬೀರ್ ,ಅಂಗನವಾಡಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಕಾಂ. ವರಲಕ್ಷ್ಮಿ, ಸೇರಿದಂತೆ ಅನೇಕರು ಇದ್ದರು.



## ಚಿತ್ತಾಪುರದಲ್ಲಿ ಆರ್‌ಎಸ್‌ಎಸ್ ಪಥ ಸಂಚಲನ ಅ.28 ಕ್ಕೆ ಶಾಂತಿಸಭೆ ನಡೆಸಿ ಅಂತಿಮ ವರದಿ ಸಲ್ಲಿಸಲು ಹೈಕೋರ್ಟು ಸೂಚನೆ

**ಕಲಬುರಗಿ,ಅ.25–** ರಾಷ್ಟ್ರೀಯ ಸ್ವಯಂಸೇವಕ ಸಂಘಟನೆ ನವೆಂಬರ್ 2 ರಂದು ಚಿತ್ತಾಪುರದಲ್ಲಿ ನಡೆಸಲು ಉದ್ದೇಶಿಸಿರುವ ಪಥ ಸಂಚಲನ ಸಂಬಂಧ ಅ.28 ರಂದು ಎಲ್ಲ ಸಂಘಟನೆಗಳ ಜೊತೆಗೆ ಶಾಂತಿ ಸಭೆ ನಡೆಸಿ ಅಂತಿಮ ವರದಿ ಸಲ್ಲಿಸಲು ಜಿಲ್ಲಾಡಳಿತಕ್ಕೆ ಕಲಬುರಗಿ ಹೈಕೋರ್ಟು ಪೀಠ ಮಹತ್ವದ ಸೂಚನೆ ನೀಡಿದೆ.ಮುಂದಿನ ವಿಚಾರಣೆಯನ್ನು ಅ,30 ಕ್ಕೆ ಮುಂದೂಡಿದೆ

ನಿಮ್ಮ ಆಡಳಿತ ಸಾಮಥ್ಯ ಸಾಬೀತಿಗೆ ಇದು ಸಕಾಲ. ಎಲ್ಲರಿಗೂ ಸಮಾಧಾನಕರವಾಗುವಂತೆ ಸಮಸ್ಯೆ ಬಗೆಹರಿಸುವಂತೆ ಸಮಸಯೆ ಬಗೆಹರಿಸಿ ಎಂದು ಕೋರ್ಟು ಸರಕಾರಕ್ಕೆ ಕಿವಿಮಾತು ಹೇಳಿದೆ .ಆರ್‌ಎಸ್‌ಎಸ್ ನ.2ರಂದು ಪಥಸಂಚಲನ ನಡೆಸಲು ಅನುಮತಿ ಕೋರಿ ಅರ್ಜಿ ಸಲ್ಲಿಸಿದರೆ, ಮತ್ತೊಂದೆಡೆ ಹಲವು ಸಂಘಟನೆಗಳು ಅಂದೇ ನಮಗೂ ಅವಕಾಶ ಕೊಡಿ ಎಂದು ಅರ್ಜಿ ಹಾಕಿದ್ದವು. ಈ ಮಧ್ಯೆ ಎಲ್ಲಾ ಅರ್ಜಿಗಳ ವಿಚಾರಣೆ ಶುಕ್ರವಾರ ಕಲಬುರಗಿಯ ಹೈಕೋರ್ಟ್ ನ್ಯಾಯಮೂರ್ತಿ ಎಂ.ಜಿ.ಎಸ್.ಕಮಲ್ ಅವರ ಏಕ ಸದಸ್ಯ ಪೀಠದಲ್ಲಿ ನಡೆಯಿತು.

ಜಿಲ್ಲಾಡಳಿತದ ಪರವಾಗಿ ಎಜಿ ಶಶಿಕಿರಣ್ ವಾದ ಮಂಡಿಸಿ ಸದ್ಯ ಪಥಸಂಚಲನಕ್ಕೆ ಅನುಮತಿ ಬೇಡ ಕಾನೂನು ಸುವ್ಯವಸ್ಥೆ ಸಮಸ್ಯೆಯಾಗುತ್ತದೆ. ಹೀಗಾಗಿ ಇನ್ನಷ್ಟು ಕಾಲಾವಕಾಶ ಕೊಡಬೇಕು ಅಂತ ವಾದ ಮಂಡಿಸಿದ್ದರು. ಈ ವೇಳೆ ಆರ್‌ಎಸ್‌ಎಸ್ ಪರ ಹಿರಿಯ ವಕೀಲ್ ಅರುಣ್ ಶ್ಯಾಮ್ ವಾದ ಮಂಡಿಸಿ, ಈಗಾಗಲೇ



ನ್ಯಾಯಾಲಯ ಸೂಚಿಸಿದಂತೆ ನವೆಂಬರ್ 2ರಂದು ಅನುಮತಿಗೆ ನಾವು ಕಾಯುತ್ತಿದ್ದೇವೆ. ಆದರೆ ದಿನ ಕಳೆದಂತೆ ಉದ್ದೇಶ ಪೂರ್ವಕವಾಗಿ ಅರ್ಜಿಗಳು ಸಲ್ಲಿಕೆಯಾಗಿ ಕಾಲಹರಣ ಮಾಡಲಾಗುತ್ತಿದೆ. ಕಾನೂನು ಸುವ್ಯವಸ್ಥೆ ಸಮಸ್ಯೆಯಿದ್ದರೆ ಕೇಂದ್ರದಿಂದ ಹೆಚ್ಚಿನ ಭದ್ರತೆ ತರಿಸಿಕೊಳ್ಳಲಿ ಅಂತ ವಾದ ಮಂಡಿಸಿದರು.

ವಾದ ಪ್ರತಿವಾದ ಆಲಿಸಿದ ಕೋರ್ಟ್ ಅಕ್ಟೋಬರ್ 28ಕ್ಕೆ ಎಲ್ಲಾ ಸಂಘಟನೆಗಳ ಜೊತೆ ಶಾಂತಿ ಸಭೆ ನಡೆಸಿ ಅಂತಿಮ ವರದಿ ಸಲ್ಲಿಸಲು ಜಿಲ್ಲಾಡಳಿತಕ್ಕೆ ಸೂಚನೆ ನೀಡಿತು. ಅಲ್ಲದೆ, ಅಕ್ಟೋಬರ್ 30ರಂದು ಮಧ್ಯಾಹ್ನ 2.30ಕ್ಕೆ ಮುಂದಿನ ವಿಚಾರಣೆಯನ್ನು ಮುಂದೂಡಿದ್ದಾರೆ.

## ಸರಕಾರಿ ಸ್ವತಂತ್ರ ಪಿಯು ಕಾಲೇಜಿನಲ್ಲಿ ಮತದಾರರ ಜಾಗೃತಿ ಆಂದೋಲನ



**ಕಲಬುರಗಿ,ಅ.25–** ನಗರದ ಸ್ಟೇಷನ್ ಬಜಾರ್ ನಲ್ಲಿರುವ ಸರಕಾರಿ ಸ್ವತಂತ್ರ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ಮತದಾರರ ಸಾಕ್ಷರತಾ ಸಂಘ ಹಾಗೂ ಭಾರತೀಯ ಚುನಾವಣಾ ಸುಧಾರಣಾ ಹೋರಾಟ ಸಮಿತಿ ಸಂಯುಕ್ತ ಆಶ್ರಯದಲ್ಲಿ ನನ್ನ ಮತ ಮಾರಾಟಕ್ಕಿಲ್ಲ –ಮತದಾರರ ಜಾಗೃತಿ ಆಂದೋಲನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.


ಪ್ರಾಂಶುಪಾಲರಾದ ಸುಜಾತಾ ಬಿರಾದಾರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ ದೇಶದಲ್ಲಿ– ರಾಜ್ಯಗಳಲ್ಲಿ ಇಂದು ರಾಜಕಾರಣದಲ್ಲಿ ಮೌಲ್ಯಗಳು ಕಡಿಮೆಯಾಗುತ್ತಿದ್ದು ಇದಕ್ಕೆ ಕಾರಣ ಅಕ್ರಮವಾದ ರೀತಿಯಲ್ಲಿ ಚುನಾವಣೆಗಳು ನಡೆಯುತ್ತಿರುವುದೇ ಮೂಲ ಕಾರಣವಾಗಿದೆ.ದೇಶದಲ್ಲಿ ಚುನಾವಣೆಗಳು ಮುಕ್ತ ಹಾಗೂ ಪಾರದರ್ಶಕವಾಗಿ ನಡೆದರೆ ಮಾತ್ರ ಪ್ರಜಾಪ್ರಭುತ್ವ ಬಲಗೊಳ್ಳುತ್ತದೆ. ಇವತ್ತು ದೇಶದಲ್ಲಿ ಸಾಕಷ್ಟು ಒಳ್ಳೆಯ ರಾಜಕಾರಣಿಗಳಿದ್ದರೂ ಚುನಾವಣೆಯಲ್ಲಿ ನಡೆಯುತ್ತಿ ರುವ ಹಣಬಲದ ಮುಂದೆ ಎಲ್ಲರೂ ಕೈಕಟ್ಟಿ ಕುಳಿತುಕೊ ಳ್ಳುವಂತಾ ಗಿದೆ. ಇವತ್ತು ಸಾಮಾಜಿಕ ವ್ಯವಸ್ಥೆ, ರಾಜಕೀಯ ವ್ಯವಸ್ಥೆ ಹಾಗೂ ಆಡಳಿತ ವ್ಯವಸ್ಥೆ ಶುದ್ಧೀಕರಣಗೊಳ್ಳಬೇಕಾಗಿದೆ ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ಎನ್.ಎಸ್ .ಎಸ್ ವಿಭಾಗಿಯ ಅಧಿಕಾರಿಗಳಾದ ಡಾ: ಚಂದ್ರಶೇಖರ ದೊಡ್ಡಮನಿ ಯವರು ಪ್ರಾಸ್ತಾವಿಕವಾಗಿ ಮಾತನಾ ಡಿದರು.

ಭಾರತೀಯ ಚುನಾವಣಾ ಸುಧಾರಣಾ ಹೋರಾಟ ಸಮಿತಿ ಸಂಸ್ಥಾಪಕರಾದ ರಮೇಶ ಆರ್.ದುತ್ತರಗಿ ಮಾತನಾಡುತ್ತಾ ಇಂದಿನ ಯುವಜನಾಂಗ ಸ್ವಾತಂತ್ರ್ಯ ಹೋರಾಟದ ಇತಿಹಾಸವನ್ನು ಅಧ್ಯಯನ ಮಾಡಿದಾಗ ಮಾತ್ರ, ಸ್ವಾತಂತ್ರ್ಯಕ್ಕಾಗಿ ನಮ್ಮ ಹಿರಿಯರು ಪಟ್ಟ ಕಷ್ಟಗಳನ್ನು ತಿಳಿದುಕೊಂಡಾಗ ಯುವಕರಲ್ಲಿ ದೇಶಾಭಿಮಾನ ಮೂಡಲಿಕ್ಕೆ ಸಾಧ್ಯ ಎಂದರು. ತಪ್ಪದೆ ಮತ ಚಲಾಯಿಸಬೇಕೆಂದು ವಿದ್ಯಾರ್ಥಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು.

ಕಾರ್ಯಕ್ರಮದಲ್ಲಿ ಉಪನ್ಯಾಸಕರಾದ ಮಲ್ಲಯ್ಯ ಮಠಪತಿ, ಬಲರಾಮು ಚೌಹಾಣ, ವಿಜಯಲಕ್ಷ್ಮಿ ಜೀವನ ರೆಡ್ಡಿ,ಶಶಿಧರ ಭೂಸನೂರ, ಶ್ರೀಶೈಲ್ ಕುರ್ದು, ಮಹಬೂಬ ನದಾಫ್, ಪಲ್ಲವಿ ಕುಲಕರ್ಣಿ ವೇದಿಕೆಯಲ್ಲಿ ಉಪಸ್ಥಿತರಿದ್ದರು.ಚುನಾವಣಾ ಸಾಕ್ಷರತಾ ಸಂಘ ಹಾಗೂ ಕಾಲೇಜಿನ ಎನ್ ಎಸ್ ಎಸ್ ಜಿಲ್ಲಾ ನೋಡಲ್ ಅಧಿಕಾರಿ ಪಾಂಡು ಎಲ್. ರಾಥೋಡ್ ಕಾರ್ಯಕ್ರಮ ನಿರೂಪಿಸಿದರು.ಸಾಂಸ್ಕೃತಿಕ ಕಾರ್ಯದರ್ಶಿಗಳಾದ ಶೀಲಾವತಿ ವಾಡೇಕರ ಸ್ವಾಗತಿಸಿದರು.ಕನ್ನಡ ಉಪನ್ಯಾಸಕ ಶಿವಶರಣಪ್ಪ ಹುಣಚಾಳ ವಂದನಾರ್ಪಣೆ ಮಾಡಿದರು.

## ನಗರಸಭೆಯಲ್ಲಿ ಸುಧಾರಣೆಗಾಗಿ ಸಾಮಾಜಿಕ ಕಾರ್ಯಕರ್ತರಿಂದ ಮನವಿ



**ಬೀದರ್,ಅ.25–** ನಗರಸಭೆಯ ಆಡಳಿತದಲ್ಲಿ ಕಾಣಿಸಿಕೊಂಡಿರುವ ಅವ್ಯವಸ್ಥೆ ಮತ್ತು ನಾಗರಿಕರಿಗೆ ಉಂಟಾಗುತ್ತಿರುವ ತೊಂದರೆಗಳ ಕುರಿತು ಸಾಮಾಜಿಕ ಕಾರ್ಯಕರ್ತ ಜಗದೀಶ್ವರ ವಿ. ಬಿರಾದಾರ ಅವರು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದ್ದಾರೆ.

ಅವರ ಮನವಿಯಲ್ಲಿ, ನಗರಸಭೆಯ ಕಛೇರಿಯಲ್ಲಿ ಇ–ಖಾತಾ ಸೇರಿದಂತೆ ಹಲವು ಕೆಲಸಗಳು ತಿಂಗಳಗಳಿಂದ ನಿಲುಗಡೆಯಾಗಿವೆ ಎಂದು ಆರೋಪಿಸಲಾಗಿದೆ. ನಾಗರಿಕರು ತಮ್ಮ ನಿವೇಶನಗಳ ದಾಖಲೆಗಾಗಿ ಕಛೇರಿಯ ಸುತ್ತಲೂ ಅಲೆದಾಡಬೇಕಾದ ಪರಿಸ್ಥಿತಿ ಉಂಟಾಗಿದೆ ಎಂದು ಅವರು ತಿಳಿಸಿದ್ದಾರೆ.

ಅವರು ಮುಂದುವರೆದು, "ಕಳೆದ ತಿಂಗಳು ಹೊಸ ಐಎಎಸ್ ಅಧಿಕಾರಿಯನ್ನು ನೇಮಕ ಮಾಡಿದರೂ ಅವರಿಗೆ ಸಹಿ ಮಾಡುವ ಅಧಿಕಾರ ನೀಡಿಲ್ಲವೆಂಬ ಮಾಹಿತಿ ಕಛೇರಿಯೊಳಗಿನಿಂದ ತಿಳಿದು ಬಂದಿದೆ. ಇದು ಆಡಳಿತದ ವೈಫಲ್ಯ ಮತ್ತು ಸಾರ್ವಜನಿಕರಿಗೆ ಅನ್ಯಾಯ," ಎಂದು ಹೇಳಿದರು.ನಗರಸಭೆಯ ವಿವಿಧ ಹಂತಗಳ ನೌಕರರ ವರ್ತನೆ ಜನರಲ್ಲಿ ಅಸಮಾಧಾನವನ್ನು ಹುಟ್ಟಿಸಿದೆ ಎಂದು ಮನವಿಯಲ್ಲಿ ಉಲ್ಲೇಖಿ ಸಲಾಗಿದೆ. "ಸಾಮಾನ್ಯ ನಾಗರಿಕ ವೇಷದಲ್ಲಿ ಅಧಿಕಾರಿಗ ಳು ಕಛೇರಿಗೆ ಭೇಟಿ ನೀಡಿದರೆ ನಿಜಸ್ಥಿತಿ ಗೊತ್ತಾಗುತ್ತದೆ," ಎಂದು ಅವರು ಸಲಹೆ ನೀಡಿದ್ದಾರೆ.ನಗರಸಭೆ ಬೀದರ್ ಪೌರಾಡಳಿತ ಇಲಾಖೆಯ ಅಡಿಯಲ್ಲಿ ಬರುವುದರಿಂದ, ಈ ವಿಷಯದಲ್ಲಿ ಜಿಲ್ಲಾಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳುವಂತೆ ಬಿರಾದಾರರು ಮನವಿ ಮಾಡಿದ್ದಾರೆ

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

9743497111 9743496111

### ಸಿರವಾರ: ಕ್ರೀಡಾಂಗಣ ಕಾಮಗಾರಿಯನ್ನು ವೀಕ್ಷಿಸಿದ ಸಚಿವ, ಶಾಸಕರು

## ತ್ವರಿತಗತಿಯಲ್ಲಿ ತಾಲೂಕ ಕ್ರೀಡಾಂಗಣ ಕಾಮಗಾರಿ ಮಾಡಿ :ಎನ್.ಎಸ್.ಬೋಸರಾಜು



ಯುವ ಮಾರ್ಗ ಸುದ್ದಿ

**ಸಿರವಾರ,ಅ.24–**ತಾಲೂಕಿನ ಕ್ರೀಡಾಭಿಮಾನಿಗಳ ಬಹುದಿನಗಳ ಬೇಡಿಕೆಯಾಗಿದ್ದ ಸಿರವಾರ ತಾಲೂಕ ಕ್ರೀಡಾಂಗಣ ಕಾಮಗಾರಿ ಒಂದೇ ಸೂರಿನಡಿ ಸೌಲಭ್ಯ ಒದಗಿಸುವ ಪ್ರಜಾಸೌಧ ಹಾಗೂ ಕ್ರೀಡಾಂಗಣ ಸ್ಥಳಕ್ಕೆ ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಸಚಿವರಾದ ಎನ್. ಎಸ್ .ಬೋಸರಾಜು ಹಾಗೂ ಶಾಸಕ ಹಂಪಯ್ಯ ನಾಯಕ ಅವರು ಶುಕ್ರವಾರ ಭೇಟಿ ನೀಡಿ ಕಾಮಗಾರಿಗಳನ್ನು ಪರಿಶೀಲಿಸಿದರು.

ತಾಲೂಕ ಕ್ರೀಡಾಂಗಣ ಕಾಮಗಾರಿಯನ್ನು ಗುಣಮಟ್ಟದೊಂದಿಗೆ ತ್ವರಿತಗತಿಯಲ್ಲಿ ಮುಗಿಸಿ ಕ್ರೀಡಾ ಪ್ರತಿಭೆಗಳಿಗೆ ಪ್ರೋತ್ಸಾಹಿಸಬೇಕಾಗಿದೆ. ಅಲ್ಲದೆ ಒಂದೇ ಸೂರಿನಡಿಯಲ್ಲಿ ಎಲ್ಲಾ ಸೌಲಭ್ಯ ಒದಗಿಸುವ ಪ್ರಜಾ ಸೌಧ ಕಟ್ಟಡ ಕಾಮಗಾರಿಯನ್ನು ಸಹ ತ್ವರಿತಗತಿಯಲ್ಲಿ ಪ್ರಾರಂಭಿಸಿ ಒಂದೇ ಸೂರಿನಡಿ ಸೌಲಭ್ಯ ಕಲ್ಪಿಸಲು ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಬೇಕಾಗಿದೆ. ಹಾಗೂ ತಾಲೂಕ ಅಗ್ನಿ ಶಾಮಕ ಠಾಣೆ ಕಾಮಗಾರಿ ನಿರ್ವಹಣೆ ಸಂದರ್ಭದಲ್ಲಿ ಅಧಿಕಾರಿಗಳು ಮುಂದೆ ನಿಂತು ಮಾಡಿಸಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ತಹಶೀಲ್ದಾರರಾದ ಅಶೋಕ ಪವಾರ್, ಮಾಜಿ ಜಿ.ಪಂ. ಸದಸ್ಯರಾದ ಕಿರಿಲಿಂಗಪ್ಪ ಕವಿತಾಳ, ಮುಖಂಡರಾದ ಶರಣಯ್ಯ ನಾಯಕ ಗುಡದಿನ್ನಿ, ಬ್ರಿಜೇಶ ಪಾಟೀಲ್, ಮಹಿಳಾ ಕಾಂಗ್ರೆಸ್ ಅದ್ಯಕ್ಷರಾದ ನಿರ್ಮಲಾ ಬೆಣ್ಣಿ, ಶಿವಕುಮಾರ ಚುಕ್ಕಿ, ದಾನನಗೌಡ, ಅರಕೇರಿ ಶಿವಶರಣ ಸಾಹುಕಾರ್, ಚಂದ್ರು ಕಳಸ, ಹಿರಿಯರಾದ ರುದ್ರಪ್ಪ ಅಂಗಡಿ, ಹಸನ್ ಅಲೀ, ಹೆಚ್ ಕೆ ಅಮರೇಶ, ನಾಗಪ್ಪ, ದುರುಗಣ್ಣ ನಾಯಕ, ನಾಗರಾಜ, ಬಸವರಾಜ ಕಲ್ಲೂರು, ಜೆ.ಅಬ್ರಹಾಂ ಹೊನ್ನಟಿಗಿ, ವಾಸು ಬಾಬು, ಸುಬ್ಬರಾವ್, ರಡ್ಡೆಪ್ಪ ತಾಂಡ, ಅಮರೇಶ ತಾಯಣ್ಣ ನಾಯ್ಕ ಸೇರಿದಂತೆ ಅನೇಕರು ಇದ್ದರು.

### 34 ಜನ ವಿಶೇಷ ಚೇತನರಿಗೆ ತ್ರಿಚಕ್ರ ವಾಹನ ನೀಡಿದ ಸಚಿವ ಎನ್.ಎಸ್ ಬೋಸರಾಜು

## ವಿಶೇಷ ಚೇತನರು ಅಸಮರ್ಥರಲ್ಲ, ಸಾಧಕರು :ಎನ್.ಎಸ್ ಬೋಸರಾಜು

ಯುವ ಮಾರ್ಗ ಸುದ್ದಿ

**ರಾಯಚೂರು,ಅ.25–**ಸ್ವಯಂ ಉದ್ಯೋಗಕ್ಕೆ ವಿಷೇಶ ಚೇತನರಿಗೆ ಅಂಗ ವೈಫಲ್ಯ ಅಡ್ಡಿಯಾಗುವದಿಲ್ಲ, ಸಮಾಜದಲ್ಲಿ ಎಲ್ಲರಂತೆ ನೀವು ಜೀವನ ನಡೆಸಲು ತ್ರಿಚಕ್ರ ವಾಹನಗಳನ್ನು ನೀಡಲಾಗಿದೆ, ನೀವೆಂದಿಗೂ ಅಸಮರ್ಥರಲ್ಲ ಅಂಗ ವೈಫಲ್ಯವಿರುವ ಅನೇಕರು ಸಾಧನೆ ಮಾಡಿದ್ದಾರೆ. ಎಲ್ಲರು ಜಾಗ್ರತೆಯಿಂದ ವಾಹನಗಳನ್ನು ಉಪಯೋಗಿಸಬೇಕೆಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ತಂತ್ರಜ್ಞಾನ ಇಲಾಖೆಯ ಸಚಿವರಾದ ಎನ್.ಎಸ್ ಬೋಸರಾಜು ತಿಳಿಸಿದರು.

ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಸಚಿವರ ಕಾರ್ಯಾಲಯದಲ್ಲಿ ತಮ್ಮ ವಿಧಾನ ಪರಿಷತ್ ಸದಸ್ಯರ ಸ್ಥಳಿಯ ಪ್ರದೇಶಾಭಿವೃದ್ಧಿ ಅನುದಾನದಡಿಯಲ್ಲಿ 34 ಜನ ವಿಷೇಶ ಚೇತನರಿಗೆ ಸಚಿವರಾದ ಎನ್.ಎಸ್ ಬೋಸರಾಜು ಅವರು ವಾಹನಗಳನ್ನು ಹಸ್ತಾಂತರಿಸಿದರು.

ಸಾರ್ವಜನಿಕ ಜೀವನದಲ್ಲಿ ಎಲ್ಲರಂತೆ ನೀವು ಆತ್ಮಸ್ಥೈರ್ಯದಿಂದ ಜೀವನವನ್ನು ಕಟ್ಟಿಕೊಳ್ಳಬೇಕು. ಸಾಮಾನ್ಯ ಜನರಿಗಿಂತ ನೀವು ಭಿನ್ನರಲ್ಲ. ಆತ್ಮವಿಶ್ವಾಸದಿಂದ ಬದುಕು ಕಟ್ಟಿಕೊಳ್ಳಲು ತಮ್ಮ ಅಂಗ



ವೈಕಲ್ಯ ಎಂದಿಗೂ ಅಡ್ಡಿ ಆಗುವುದಿಲ್ಲ ಎಂದು ವಿಶೇಷ ಚೇತನರಿಗೆ ಆತ್ಮಸ್ಥೈರ್ಯ ತುಂಬಿದರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಮಹಾಪೌರರಾದ ನರಸಮ್ಮ ನರಸಿಂಹಲು ಮಾಡಗಿರಿ, ಉಪ ಮಹಾಪೌರರಾದ ಸಾಜಿದ್ ಸಮೀರ್, ಹಿರಿಯರಾದ ಬಶೀರುದ್ದಿನ್, ಜಯಣ್ಣ, ಕೆ ಶಾಂತಪ್ಪ, ಮೊಹ್ಮದ್ ಶಾಲಂ, ಶಿವಮೂರ್ತಿ, ರುದ್ರಪ್ಪ ಅಂಗಡಿ, ತಿಮ್ಮಾರೆಡ್ಡಿ, ಬಿ ರಮೇಶ್, ಶಾಮ್ ಸುಂದರ್, ರಸೂಲ್ ಸಾಬ್, ಅಫ್ಜಲ್ ನಾಯಕ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಸೇವಾ ಕಾರ್ಯಗಳೊಂದಿಗೆ ರಾಜಾಮಂಜುನಾಥ್ ನಾಯಕ 30ನೇ ವರ್ಷದ ಹುಟ್ಟುಹಬ್ಬ ಆಚರಣೆ



ಯುವ ಮಾರ್ಗ ಸುದ್ದಿ

**ಮಾನ್ವಿ,ಅ.25–**ತಾಲೂಕಿನ ಪೋತ್ನಾಳ ಗ್ರಾಮದ ಸರ್ವ ಜಾತಿ ಜನಾಂಗದ ಪ್ರೀತಿಯ ಯುವ ನಾಯಕ ಯುವಕರ ಕಣ್ಮಣಿ ಕಷ್ಟ ಅಂತ ಬಂದರೆ ಜೊತೇಲಿ ನಿಂತು ಧೈರ್ಯ ತುಂಬುವ ಮೂಲಕ ಚಿಕ್ಕ ವಯಸ್ಸಿನಲ್ಲೇ ಅಪಾರ ಅಭಿಮಾನ ಬಳಗ ಹೊಂದಿರುವ ಭವಿಷ್ಯದ ನಾಯಕ ದಿವಂಗತ ಶ್ರೀನಿವಾಸ್ ನಾಯಕ ಅವರ ತಮ್ಮನಾದ ಯುವ ಕಾಂಗ್ರೆಸ್ ಮುಖಂಡ ರಾಜ ಮಂಜುನಾಥ್ ನಾಯಕ ರವರ 30 ನೇ ವರ್ಷದ ಹುಟ್ಟು ಹಬ್ಬದ ಅಂಗವಾಗಿ ರಾಜ್ಯ ಮಟ್ಟದ ಸಂಗ್ರಣಿ ಕಲ್ಲು ಎತ್ತುವ ಸ್ಪರ್ಧೆ ಹಮ್ಮಿಕೊಳ್ಳಲಾಗಿತ್ತು.

ಈ ಕಾರ್ಯಕ್ರಮದಲ್ಲಿ ಮುಖಂಡರು ಕೇಕ್ ಕತ್ತರಿಸುವ ಮೂಲಕ ಶುಭ ಹಾರೈಸಿದರು. ನಂತರದಲ್ಲಿ ಕಾರ್ಯಕ್ರಮದ್ದೇಶಿಸಿ ಮಾತನಾಡಿ ಇಂದಿನ ಆಧುನಿಕ ಯುಗದ ಭರಾಟೆಯಿಂದಾಗಿ ಹಿಂದಿನ ಕಾಲದ ಗ್ರಾಮೀಣ ಕ್ರೀಡೆ ನಶಿಸಿ ಹೋಗುತ್ತಿದೆ. ಈಗಿನ ಕಾಲದ ವೇಟ್ ಲಿಫ್ಟಿಂಗ್ ಹಿಂದಿನ ಕಾಲದಲ್ಲಿಯೂ ಇತ್ತು. ಅದನ್ನು ಸಂಗ್ರಾಣಿ ಕಲ್ಲು ಎತ್ತುವ ಕ್ರೀಡೆ ಎಂದೇ ಕರೆಯುತ್ತಿದ್ದರು. ಇಂತಹ ಸಾಹಸ ಪ್ರದರ್ಶನ ಗ್ರಾಮೀಣ ಪ್ರದೇಶದಲ್ಲಿ ಇನ್ನೂ ಇರುವುದು ಗಮನ ಸೆಳೆಯುವಂತಾಗಿದೆ ಮುಂದಿನ ದಿನಗಳಲ್ಲಿ ಇನ್ನಷ್ಟು ಸಮಾಜಮುಖಿ ಕಾರ್ಯಗಳನ್ನು ಕೈಗೊಳ್ಳಲು ಅವಕಾಶ ನೀಡಲ್ಲಿ ಎಂದು ಹಾರೈಸಿದರು.

**ಸಂಗ್ರಣಿ ಕಲ್ಲು ಎತ್ತುವ ಸ್ಪರ್ಧೆ :**ಈ ಸ್ಪರ್ಧೆಯಲ್ಲಿ ರಾಯಚೂರು ಜಿಲ್ಲೆಯ ವಿವಿಧ ಭಾಗಗಳಿಂದ ಪೈಲ್ವಾನಗಳು ಆಗಮಿಸಿದರು

ಮಧ್ಯಾಹ್ನ 2ಗಂಟೆ ಗೆ ಸ್ಪರ್ಧೆ ಆರಂಭಗೊಂಡು, ರೋಚಕ ಕ್ಷಣಕ್ಕೆ ಸಾಕ್ಷಿ ಆಯಿತು.ಯುವ ಸಮುದಾಯ ಕೆಕೆ, ಸಿಳ್ಳೆ ಹೊಡೆಯುವ ಮೂಲಕ ಸ್ಪರ್ಧಿಗಳಲ್ಲಿ ಉತ್ಸಾಹ ಮೂಡಿಸಿತು. ವಿವಿಧ ಭಾಗಗಳಿಂದ ಆಗಮಿಸಿದ ಪೈಲ್ವಾನ್‌ಗಳು ತಮ್ಮ ಶಕ್ತಿ ಅನುಸಾರ ಭಾರವಾದ ಕಲ್ಲು ಎತ್ತಿ ಪ್ರದರ್ಶನ ಮಾಡಿದರು. ಸ್ಪರ್ಧೆಗಳು ಮುಗಿದ ನಂತರ ವಿಜೇತರಿಗೆ ನಗದು ಬಹುಮಾನ ನೀಡಿ ಗೌರವಿಸಲಾಯಿತು.

ಪ್ರಥಮ ಬಹುಮಾನ ನಾಗನದೊಡ್ಡಿ ಪ್ರತಾಪ ನಾಯಕ 10,000. ದ್ವಿತೀಯ ಬಹುಮಾನ ಮೈಬೂಸಾಬ್ ತುಂಬಂಳಂ 5000. ತೃತೀಯ ಬಹುಮಾನ ನಾಗೇಶ ಕೆಂಚಲ್ ದೇವಪಡ 3000 ಸಾವಿರ ರೂ ನಗದು ಬಹುಮಾನ ನೀಡಿ ಸನ್ಮಾನಿಸಲಾಯಿತು.

ಈ ಸಂಧರ್ಭದಲ್ಲಿ ಬಿಜೆಪಿ ಪಕ್ಷದ ಮಾಜಿ ಶಾಸಕರಾದ ಬಸವನಗೌಡ ಬ್ಯಾಗವಟ್,ಕಾಂಗ್ರೆಸ್ ಮುಖಂಡ ಬಾಲಸ್ವಾಮಿ ಕೊಡ್ಲಿ, ರಾಜಾ ಸುಭಾಷ ನಾಯಕ, ಸೈಯದ್ ಖಾಲಿದ್ ಖಾದ್ರಿ, ಸೇರಿದಂತೆ ಶ್ರೀನಿವಾಸ ನಾಯಕ ಗೆಳೆಯ ಬಳಗ ಹಾಗೂ ರಾಜಾ ಮಂಜುನಾಥ್ ನಾಯಕ ಅಭಿಮಾನಿಗಳು, ಕ್ರೀಡಾ ಅಭಿಮಾನಿಗಳು ಗ್ರಾಮಸ್ಥರು ಮತ್ತು ಸುತ್ತಮುತ್ತಲಿನ ಗ್ರಾಮಗಳ ಸಾರ್ವಜನಿಕರು ಪಾಲ್ಗೊಂಡಿದ್ದರು.

# ರಾಯಚೂರು ಜಿಲ್ಲೆಯಲ್ಲಿ ಮಕ್ಕಳ ಸಹಾಯವಾಣಿ 1098 ಕರೆಗಳಿಗೆ ಸ್ಪಂದನೆ; ಪೂರ್ಣ 215 ಪ್ರಕರಣಗಳು ವಿಲೆ



ರಾಯಚೂರು ಜಿಲ್ಲೆಯಲ್ಲಿ ಮಕ್ಕಳ ಸಹಾಯವಾಣಿ–1098 ಉತ್ತಮ ಕಾರ್ಯನಿರ್ವಹಣೆಯಾಗುತ್ತಿದೆ. ಇದರಿಂದಾಗಿ ಸಂಕಷ್ಟದ ಪರಿಸ್ಥಿತಿಯಲ್ಲಿರುವ ಮಕ್ಕಳಿಗೆ ತುರ್ತಾಗಿ ಸ್ಪಂದಿಸಲು ಹಾಗೂ ಅಗತ್ಯ ನೆರವು ನೀಡಲು ಅನುಕೂಲವಾಗಿದೆ.

ಬಾಲ್ಯವಿವಾಹ, ಬಾಲಕಾರ್ಮಿಕ, ಭಿಕ್ಷಾಟನೆ, ಕಾಣೆಯಾದ ಮಕ್ಕಳು, ಮಕ್ಕಳ ಮೇಲಿನ ದೌರ್ಜನ್ಯ ಹಾಗೂ ಆಪ್ತ ಸಮಾಲೋಚನೆಗೆ ಸಂಬಂಧಿಸಿದಂತೆ 2024–25ನೇ ಸಾಲಿನಲ್ಲಿ ಜನವರಿ ಮಾಹೆಯಿಂದ ಡಿಸೆಂಬರ್ ಮಾಹೆವರೆಗೆ ಒಟ್ಟು 215 ಪ್ರಕರಣಗಳು ದಾಖಲಾಗಿದ್ದು, ದಾಖಲಾದ ಎಲ್ಲ ಪ್ರಕರಣಗಳನ್ನು ವಿಲೇ ಮಾಡಲಾಗಿದೆ.

ರಾಯಚೂರು ಜಿಲ್ಲೆಯಾದ್ಯಂತ ಬಾಲ್ಯವಿವಾಹ ತಡೆಗೆ ಜಿಲ್ಲಾಡಳಿತವು ಕಟ್ಟುನಿಟ್ಟಿನ ಕ್ರಮ ವಹಿಸಿದೆ. ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಮತ್ತು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಈಶ್ವರ ಕಾಂದೂ ಅವರು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳೊಂದಿಗೆ ಕಾಲಕಾಲಕ್ಕೆ ಸಭೆ ನಡೆಸಿ ವಿಶೇಷವಾಗಿ ಬಾಲ್ಯವಿವಾಹ ಹಾಗೂ ಬಾಲಕಾರ್ಮಿಕ ತಡೆ ಕ್ರಮಕ್ಕೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದರಿಂದಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿಗಳು ಕ್ರಮವಹಿಸಿದ್ದಾರೆ. ಇದರಿಂದಾಗಿ 2024–25ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಯಲ್ಲಿ ಬಾಲ್ಯವಿವಾಹ ಪ್ರಕರಣಗಳನ್ನು ಶೂನ್ಯಕ್ಕಿಳಿಸಿ ಉತ್ತಮ ಸಾಧನೆ ತೋರಲಾಗಿದೆ.

ಬಾಲ್ಯವಿವಾಹವು ನಮ್ಮ ಸಮಾಜಕ್ಕೆ ಅಂಟಿದ ಕಳಂಕವಾಗಿದೆ. ರಾಯಚೂರು ಜಿಲ್ಲೆಯ ಸಾರ್ವಜನಿಕರಲ್ಲಿ ಈ ಬಗ್ಗೆ ಜಾಗೃತಿ ಮೂಡುತ್ತಿದೆ. ಬಾಲ್ಯವಿವಾಹ ತಪ್ಪು ಎಂಬುದು ಶಾಲಾ–ಕಾಲೇಜು ಮಕ್ಕಳಿಗೆ ಅರಿವಿಗೆ ಬರುತ್ತಿದೆ. ಬಾಲ್ಯವಿವಾಹಕ್ಕೆ ಸಂಬಂಧಿಸಿದಂತೆ ಮಕ್ಕಳ ಸಹಾಯವಾಣಿ–1098ಗೆ 2024–25ನೇ ಸಾಲಿನಲ್ಲಿ ರಾಯಚೂರು ತಾಲೂಕಿನಿಂದ 22, ಮಾನವಿ ತಾಲೂಕಿನಿಂದ 16, ಸಿರವಾರ ತಾಲೂಕಿನಿಂದ 9, ದೇವದುರ್ಗ ತಾಲೂಕಿನಿಂದ 31, ಸಿಂಧನೂರ ತಾಲೂಕಿನಿಂದ 12, ಲಿಂಗಸೂರ ತಾಲೂಕಿನಿಂದ 20 ಹಾಗೂ ಮಸ್ಕಿ ತಾಲೂಕಿನಿಂದ 16 ಕರೆಗಳು ಸ್ವೀಕೃತವಾಗಿದ್ದು, ಸಂಬಂಧಿಸಿದ ಅಧಿಕಾರಿಗಳು ತುರ್ತು ಕ್ರಮವಹಿಸಿ ದಾಖಲಾದ ಎಲ್ಲಾ 126 ಪ್ರಕರಣಗಳನ್ನು ಯಶಸ್ವಿಯಾಗಿ ವಿಲೆಗೊಳಿಸಿದ್ದಾರೆ.

ಬಾಲ ಕಾರ್ಮಿಕ ಪ್ರಕರಣಗಳಿಗೆ ಸಂಬಂಧಿಸಿದಂತೆ ಮಕ್ಕಳ ಸಹಾಯವಾಣಿ–1098ಗೆ 2024–25ನೇ ಸಾಲಿನಲ್ಲಿ ರಾಯಚೂರು ತಾಲೂಕಿನಿಂದ 19, ದೇವದುರ್ಗ ತಾಲೂಕಿನಿಂದ 5, ಸಿರವಾರ ಮತ್ತು ಸಿಂಧನೂರ ತಾಲೂಕುಗಳಿಂದ ತಲಾ 2 ಮತ್ತು ಮಾನವಿ ಮತ್ತು ಲಿಂಗಸೂರ ತಾಲೂಕಿನಿಂದ ತಲಾ 1 ಪ್ರಕರಣಗಳು ದಾಖಲಾಗಿದ್ದು, ಎಲ್ಲಾ 30 ಪ್ರಕರಣಗಳನ್ನು ವಿಲೆಗೊಳಿಸಲಾಗಿದೆ. 2024–25ನೇ ಸಾಲಿನಲ್ಲಿ ಸಿರವಾರ, ದೇವದುರ್ಗ ಮತ್ತು ಮಸ್ಕಿ ತಾಲೂಕುಗಳು ಭಿಕ್ಷಾಟನೆ ಮುಕ್ತ ತಾಲೂಕುಗಳಾಗಿ ಗುರುತಿಸಿಕೊಂಡಿವೆ. ಮಕ್ಕಳ ಕಾಣೆಗೆ ಸಂಬಂಧಿಸಿದಂತೆ ರಾಯಚೂರು ತಾಲೂಕು ಮತ್ತು ಸಿಂಧನೂರ ತಾಲೂಕಿನಿಂದ ತಲಾ 5 ಕರೆಗಳು, ಲಿಂಗಸೂರಿನಿಂದ 2 ಹಾಗೂ ದೇವದುರ್ಗ ಮತ್ತು ಮಸ್ಕಿ ತಾಲೂಕಿನಿಂದ ತಲಾ 1 ಸೇರಿ ದಾಖಲಾದ 14 ಮಕ್ಕಳ ಕಾಣೆ ಕರೆಗಳಿಗೆ ಸ್ಪಂದನೆ ನೀಡಿ ಎಲ್ಲ ಪ್ರಕರಣಗಳನ್ನು ವಿಲೆಗೊಳಿಸಲಾಗಿದೆ.

2024–25ನೇ ಸಾಲಿನಲ್ಲಿ ಮಕ್ಕಳ ಮೇಲಿನ ದೌರ್ಜನ್ಯಕ್ಕೆ ಸಂಬಂಧಿಸಿದ ಅತಿ ಹೆಚ್ಚು 10 ಕರೆಗಳು ರಾಯಚೂರು ತಾಲೂಕಿನಿಂದಲೇ ದಾಖಲಾಗಿವೆ. ದೇವದುರ್ಗ ತಾಲೂಕಿನಿಂದ 5 ಕರೆಗಳು, ಸಿಂಧನೂರ ಮತ್ತು ಲಿಂಗಸೂಗು ತಾಲೂಕಿನಿಂದ ತಲಾ 4 ಕರೆಗಳು ಹಾಗೂ ಮಾನವಿ ತಾಲೂಕಿನಿಂದ 2 ಕರೆಗಳು ಸ್ವೀಕೃತವಾಗಿದ್ದು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳು, ಪೊಲೀಸ್ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ಉತ್ತಮ ಕಾರ್ಯನಿರ್ವಹಣೆ ತೋರಿ ದಾಖಲಾದ ಎಲ್ಲಾ 27 ಪ್ರಕರಣಗಳನ್ನು ವಿಲೆಗೊಳಿಸಲಾಗಿದೆ.

ಆಪ್ತ ಸಮಾಲೋಚನೆಗೆ ಸಂಬಂಧಿಸಿದಂತೆ ರಾಯಚೂರು ತಾಲೂಕಿನಿಂದ 5 ಕರೆಗಳು ಮತ್ತು ಸಿರವಾರ, ದೇವದುರ್ಗ ಹಾಗೂ ಲಿಂಗಸೂರು ತಾಲೂಕಿನಿಂದ ತಲಾ 1 ಕರೆಗಳು ಬಂದಿದ್ದು, ಎಲ್ಲ 8 ಕರೆಗಳಿಗೆ ಸ್ಪಂದಿಸಿ ವಿಲಗೊಳಿಸಲಾಗಿದೆ.

ಶಾಶ್ವತ ಫಲಕದಲ್ಲಿ ಪ್ರದರ್ಶಿಸಲು ಸೂಚನೆ: ಮಕ್ಕಳ ಗುರುತಿಸುವಿಕೆ, ಸಂಕಷ್ಟ ಸ್ಥಿತಿಯಲ್ಲಿ ಮಾಹಿತಿ ಹಂಚಿಕೊಳ್ಳಲು ಹಾಗೂ ಪುನರ್ ವಸತಿ ಸೇವೆ ಕಲ್ಪಿಸುವಲ್ಲಿ ಮಕ್ಕಳ ಸಹಾಯವಾಣಿ 1098 ಮಹತ್ವದ ಪಾತ್ರ ವಹಿಸುತ್ತದೆ. ಈ ಸಂಖ್ಯೆಯನ್ನು ವ್ಯಾಪಕವಾಗಿ ಪ್ರಚಾರ ಮಾಡಿದಲ್ಲಿ ಬಾಲ್ಯವಿವಾಹ, ಬಾಲಕಾರ್ಮಿಕತೆ ಸಂಕಷ್ಟದಲ್ಲಿನ ಮಕ್ಕಳ ರಕ್ಷಣೆ ಸೇರಿದಂತೆ ವಿವಿಧ ರೀತಿಯ ಮಕ್ಕಳ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಲು ಸಾಧ್ಯವಾಗಲಿದೆ. ಈ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರದ ಎಲ್ಲಾ ಸರ್ಕಾರಿ, ಅರೆ ಸರ್ಕಾರಿ, ಶೈಕ್ಷಣಿಕ ಸಂಸ್ಥೆಗಳು, ಖಾಸಗಿ ಸೇವಾ ಸಂಸ್ಥೆಗಳು ಸೇರಿದಂತೆ ಎಲ್ಲಾ ಕಟ್ಟಡಗಳ ಮೇಲೆ ಮಕ್ಕಳ ಸಹಾಯವಾಣಿ ಸಂಖ್ಯೆ 1098ನ್ನು ಕಡ್ಡಾಯವಾಗಿ ಶಾಶ್ವತ ಫಲಕದಲ್ಲಿ ಪ್ರದರ್ಶಿಸಲು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಾದ ಶಾಲಿನಿ ರಜನೀಶ ಅವರು ಇತ್ತೀಚೆಗಷ್ಟೇ ಸೂಚನೆ ನೀಡಿದ್ದನ್ನು ಇಲ್ಲಿ ಸ್ಮರಿಸಬಹುದಾಗಿದೆ.

ಸಂಕಷ್ಟದಲ್ಲಿನ ಮಕ್ಕಳ ಹಿತರಕ್ಷಣೆಗೆ ಒತ್ತು: ಮಕ್ಕಳ ಕಲ್ಯಾಣ ಮತ್ತು ಸುರಕ್ಷತೆಯನ್ನು ಬೆಂಬಲಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯವು ಮಿಷನ್ ವಾತ್ಸಲ್ಯ ಯೋಜನೆ ಜಾರಿ ತಂದಿದೆ. ಮಕ್ಕಳ ಹಕ್ಕುಗಳ ರಕ್ಷಣೆ ಇಂದಿನ ತುರ್ತು ಅಗತ್ಯವಾಗಿದೆ. ಈ ಹಿನ್ನೆಲೆಯಲ್ಲಿ ಅನುಷ್ಠಾನಗೊಂಡಿರುವ ಮಿಷನ್ ವಾತ್ಸಲ್ಯ ಯೋಜನೆಯು ಮಕ್ಕಳ ಅಭಿವೃದ್ಧಿ ಮತ್ತು ರಕ್ಷಣೆಯ ಆದ್ಯತೆಯನ್ನು ಸಾಧಿಸುವ ಒಂದು ಮಾರ್ಗವಾಗಿದೆ. ಸಂಕಷ್ಟದಲ್ಲಿನ ಹಾಗೂ ಸವಾಲಿನಲ್ಲಿರುವ ಮಕ್ಕಳ ಹಿತರಕ್ಷಣೆಗೆ ಹೆಚ್ಚು ಒತ್ತು ನೀಡುತ್ತಿದೆ.

**2025–26ನೇ ಸಾಲಿನ ಸೆಪ್ಟೆಂಬರ್ 2025ರ ಅಂತ್ಯದವರೆಗೆ ಬಾಲ್ಯವಿವಾಹ, ಬಾಲಕಾರ್ಮಿಕ, ಭಿಕ್ಷಾಟನೆ, ಕಾಣೆಯಾದ ಮಕ್ಕಳು ಸೇರಿದಂತೆ ವಿವಿಧ ವಿಷಯಕ್ಕೆ ಸಂಬಂಧಿಸಿದಂತೆ 178 ಪ್ರಕರಣಗಳು ದಾಖಲಾಗಿದ್ದು ಈ ಪೈಕಿ 172 ಪ್ರಕರಣಗಳನ್ನು ವಿಲೇಗೊಳಿಸಿದ್ದು, 6 ಪ್ರಕರಣಗಳು ಬಾಕಿ ಇವೆ.**

**–ಅಮರೇಶ ಹಾವಿನ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ರಾಯಚೂರು ಜಿಲ್ಲೆ**

**– ಗವಿಸಿದ್ದಪ್ಪ ಹೊಸಮನಿ, ವಾರ್ತಾ ಸಹಾಯಕರು,**
**ವಾರ್ತಾ ಇಲಾಖೆ, ರಾಯಚೂರು**

# ಪಿಒಕೆಯಲ್ಲಿ ಮಾನವ ಹಕ್ಕುಗಳ ಉಲ್ಲಂಘನೆ: ಪಾಕ್‌ಗೆ ಭಾರತ ತರಾಟೆ




**ನ್ಯೂಯಾರ್ಕ್,ಅ.25–** ಜಮ್ಮು ಮತ್ತು ಕಾಶ್ಮೀರ, ಭಾರತದ ಅವಿಭಾಜ್ಯ ಅಂಗ, ಅದನ್ನು ಎಂದಿಗೂ ಯಾರಿಂದಲೂ ಬೇರ್ಪ ಡಿಸಲು ಸಾಧ್ಯವಿಲ್ಲ ಎಂದು ವಿಶ್ವಸಂಸ್ಥೆಯಲ್ಲಿ ಭಾರತ– ಪಾಕಿಸ್ತಾನಕ್ಕೆ ಖಡಕ್ ಸಂದೇಶ ರವಾನಿಸಿದೆ.

ಪಾಕಿಸ್ತಾನ ಆಕ್ರಮಿತ ಕಾಶ್ಮೀರ –ಪಿಒಕೆಯಲ್ಲಿ ಪ್ರತಿಭಟನಾಕಾರರ ಮೇಲೆ ಪಾಕಿಸ್ತಾನ ಸೇನೆ ಗುಂಡು ಹಾರಿಸಿದ ನಂತರ ಹಲವಾರು ನಾಗರಿಕರು ಸಾವನ್ನಪ್ಪಿದ್ದು ಮಾನವ ಹಕ್ಕುಗಳ ಉಲ್ಲಂಘನೆ ಮಾಡುವುದನ್ನು ತಕ್ಷಣವೇ ನಿಲ್ಲಿಸುವಂತೆ ಪಾಕಿಸ್ತಾನಕ್ಕೆ ಭಾರತ ಒತ್ತಾಯಿಸಿದೆ.

ವಿಶ್ವಸಂಸ್ಥೆಯ 80ನೇ ದಿನದಂದು ಆಯೋಜಿಸಲಾದ ಮುಕ್ತ ಚರ್ಚೆಯ ಸಂದರ್ಭದಲ್ಲಿ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಸಾಮಾನ್ಯ ಸಭೆಯನ್ನುದ್ದೇಶಿಸಿ ಮಾತನಾಡಿದ ಭಾರತದ ಖಾಯಂ ಪ್ರತಿನಿಧಿ ಪರ್ವತನೇನಿ ಹರೀಶ್, ಪಾಕ್ ಆಕ್ರಮಿತ ಕಾಶ್ಮಿರದ ಜನರ ಬೇಡಿಕೆಗಳನ್ನು ಈಡೇರಿಸಲು ಪಾಕಿಸ್ತಾನ ವಿಫಲವಾಗಿದೆ. ಹೀಗಾಗಿ ಪ್ರತಿಭಟನೆಗಳು ಭುಗಿಲೆದ್ದಿವೆ. ಇದನ್ನು ತಕ್ಷಣ ನಿಲ್ಲಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ಪಾಕಿಸ್ತಾನ ಅಕ್ರಮವಾಗಿ ಆಕ್ರಮಿಸಿಕೊಂಡಿರುವ ಪ್ರದೇಶದಲ್ಲಿ ಮಾನವ ಹಕ್ಕುಗಳ ಉಲ್ಲಂಘನೆ ಪದೇ ಪದೇ ಆಗುತ್ತಿದೆ, ಇದನ್ನು ನೋಡಿಕೊಂಡು ಕೂರಲು ಸಾಧ್ಯವಿಲ್ಲ, ಪಾಕಿಸ್ತಾನ ತಕ್ಷಣ ಮಾನವ ಹಕ್ಕುಗಳ ಉಲ್ಲಂಘನೆಯಾಗುತ್ತಿರುವುದನ್ನು ನಿಲ್ಲಸಬೇಕು ಎಂದು ಒತ್ತಾಯಿಸಿದ್ದಾರೆ.

ಪಾಕಿಸ್ತಾನ ಆಕ್ರಮಿಸಿಕೊಂಡಿರುವ ಪ್ರದೇಶಗಳಲ್ಲಿ ನಡೆಯುತ್ತಿರುವ ಕ್ರೌರ್ಯ, ದೌರ್ಜನ್ಯ ಮತ್ತು ಮಾನವ ಹಕ್ಕುಗಳ ಉಲ್ಲಂಘಟನೆ ನಿಲ್ಲಿಸಬೇಕು, ಜೊತೆಗೆ ಪಾಕಿಸ್ತಾನ ಸೇನೆಯ ಆಕ್ರಮಣ, ದಮನ, ಕ್ರೌರ್ಯ ಮತ್ತು ಸಂಪನ್ಮೂಲಗಳ ಅಕ್ರಮ ಶೋಷಣೆಯ ವಿರುದ್ಧ ಜನಸಂಖ್ಯೆಯು ಬಹಿರಂಗ ದಂಗೆ ಎದ್ದಿದೆ ಅದಕ್ಕೆ ಮತ್ತಷ್ಟು ಅವಕಾಶ ಮಾಡಿಕೊಡಬಾರದು ಎಂದು ಹೇಳಿದ್ದಾರೆ.

ಜಮ್ಮು ಮತ್ತು ಕಾಶ್ಮೀರ ಯಾವಾಗಲೂ "ಭಾರತದ ಅವಿಭಾಜ್ಯ ಮತ್ತು ಬೇರ್ಪಡಿಸಲಾಗದ ಭಾಗ"ವಾಗಿ ಉಳಿಯುತ್ತದೆ ಮತ್ತು ಇಲ್ಲಿನ ಜನರು ತಮ್ಮ ಮೂಲಭೂತ ಹಕ್ಕುಗಳನ್ನು ಆನಂದಿಸುತ್ತಾರೆ. ಹೀಗಿದ್ದರೂ ಪಾಕಿಸ್ತಾನ ವಿನಾ ಕಾರಣ ಕಾಲು ಕೆರೆದುಕೊಂಡು ಬರುತ್ತಿದೆ, ಇದು ಭವಿಷ್ಯದ ದೃಷ್ಟಿಯಿಂದ ಒಳ್ಳೆಯ ಬೆಳವಣಿಗೆ ಅಲ್ಲ ಎಂದು ತಿಳಿಸಿದ್ದಾರೆ.

"ಜಮ್ಮು ಮತ್ತು ಕಾಶ್ಮೀರದ ಕೇಂದ್ರಾಡಳಿತ ಪ್ರದೇಶ, ಭಾರತದ ಅವಿಭಾಜ್ಯ ಮತ್ತು ಬೇರ್ಪಡಿಸಲಾಗದ ಭಾಗವಾಗಿದೆ, ಮತ್ತು ಯಾವಾಗಲೂ ಭಾರತದ ಭಾಗವೇ ಆಗಿರಲಿದೆ, ಇದನ್ನು ಯಾರಿಂದಲೂ ಬೇರ್ಪಡಿಸಲು ಸಾಧ್ಯವಾಗದ ಮಾತು ಎಂದು ಪರೋಕ್ಷವಾಗಿ ಪಾಕಿಸ್ತಾನಕ್ಕೆ ತಿರುಗೇಟು ನೀಡಿದ್ದಾರೆ.

ಜಮ್ಮು ಮತ್ತು ಕಾಶ್ಮೀರದ ಜನರು ಭಾರತದ ಕಾಲ–ಪರೀಕ್ಷಿತ ಪ್ರಜಾಪ್ರಭುತ್ವ ಸಂಪ್ರದಾಯಗಳು ಮತ್ತು ಸಾಂವಿಧಾನಿಕ ಚೌಕಟ್ಟಿನ ಪ್ರಕಾರ ತಮ್ಮ ಮೂಲಭೂತ ಹಕ್ಕುಗಳನ್ನು ಚಲಾಯಿಸುತ್ತಾರೆ. ಪಾಕಿಸ್ತಾನಕ್ಕೆ ಪರಕೀಯ ಪರಿಕಲ್ಪನೆಗಳು. ಹೀಗಾಗಿ ಭಾರತದ ಆಂತರಿಕ ವಿಷಯದಲ್ಲಿ ಮೂಗು ತೂರಿಸುವ ಕೆಲಸ ಮಾಡಬೇಡಿ ಎಂದು ಎಚ್ಚರಿಕೆ ನೀಡಿದರು.

ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿ ಪ್ರತಿಭಟನಾಕಾರರ ಮೇಲೆ ಪಾಕಿಸ್ತಾನಿ ಸೇನೆ ಗುಂಡು ಹಾರಿಸಿದ ನಂತರ ಹಲವಾರು ನಾಗರಿಕರು ಸಾವನ್ನಪ್ಪಿದರು. ಜನರ ಬೇಡಿಕೆಗಳನ್ನು ಪರಿಹರಿಸಲು ಸರ್ಕಾರ ವಿಫಲವಾದ ನಂತರ ಅಶಾಂತಿ ಭುಗಿಲೆದ್ದಿತು. ಪ್ರತಿಭಟನೆಗಳನ್ನು ಜಂಟಿ ಅವಾಮಿ ಕ್ರಿಯಾ ಸಮಿತಿ ಮುನ್ನಡೆಸಿದೆ ಎಂದು ಅವರು ಮಾಹಿತಿ ಹಂಚಿಕೊಂಡಿದ್ದಾರೆ.

# ಎ–ಖಾತಾ ಪರಿವರ್ತನೆ ನೆಪದಲ್ಲಿ ಲೂಟಿ ಮಾಡುತ್ತಿದೆ ಸರ್ಕಾರ : ಹೆಚ್ಡಿಕೆ ಆರೋಪ



**ಬೆಂಗಳೂರು,ಅ.25–** ರಾಜ್ಯ ಸರ್ಕಾರ ದೀಪಾವಳಿ ಕೊಡುಯಾಗಿ ಬಿ ಖಾತಾಯಿಂದ ಎ ಖಾತಾಗೆ ಪರಿವರ್ತನೆ ಮಾಡುವುದಾಗಿ ಹೇಳಿ ಜನರಿಗೆ ಟೋಪಿ ಹಾಕುತ್ತಿದೆ ಎಂದು ಕೇಂದ್ರ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತಾ ಸಚಿವ ಎಚ್.ಡಿ.ಕುಮಾರಸ್ವಾಮಿ ಆರೋಪಿಸಿದರು.

ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು, ಸ್ವತ್ತಿನ ಮಾರ್ಗಸೂಚಿ ದರದ ಮೇಲೆ ಶೇ.5ರಷ್ಟು ಪಾವತಿಸಿ ಬಿ ಖಾತೆಯಿಂದ ಎ ಖಾತೆಗೆ ಪರಿವರ್ತಿಸಿಕೊಳ್ಳಲು ಅವಕಾಶ ಕಲ್ಪಿಸಿರುವುದಾಗಿ ಸರ್ಕಾರ ಹೇಳಿದೆ. ವಾಸ್ತವವಾಗಿ ಬಿಬಿಎಂಪಿ ಮುನ್ಸಿಪಾಲ್ ಕಾಯ್ದೆಯಡಿ ಎ ಖಾತಾ ಬಿ ಖಾತಾ ಎಂಬುದೇನಿಲ್ಲ. ಸಾರ್ವಜನಿಕ ಗೊಂದಲ ಉಂಟು ಮಾಡಲಾಗುತ್ತಿದೆ ಎಂದರು.ಖಾತಾ ಪರಿವರ್ತನೆ ಹೆಸರಿನಲ್ಲಿ ಸರ್ಕಾರ ಜನರನ್ನು ದಾರಿ ತಪ್ಪಿಸಿ ಹಗಲು ದರೋಡೆ ಮಾಡಲು ಹೊರಟಿದೆ. ಇದಕ್ಕೆ ಮರಳಾಗಬೇಡಿ. ಮುಂದೆ ನಮ ಸರ್ಕಾರ ಬರಲಿದ್ದು, ಹಳೆಯ ವ್ಯವಸ್ಥೆಯನ್ನು ಜಾರಿಗೆ ತಂದು ಜನರ ಹಿತ ಕಾಪಾಡಲಿದೆ ಎಂದು ಹೇಳಿದರು.

ಸರ್ಕಾರದ ಖಜಾನೆಯಲ್ಲಿ ಹಣವಿಲ್ಲ. ಖಾತಾ ಪರಿವರ್ತನೆ ಹೆಸರಿನಲ್ಲಿ ಜನರ ಹಣವನ್ನು ಲೂಟಿ ಮಾಡುತ್ತಿದ್ದಾರೆ. ಹಗಲು ದರೋಡೆ ಮಾಡುತ್ತಿದ್ದಾರೆ. ಖಜಾನೆ ತುಂಬಿಸಲು ಈ ಯೋಜನೆಗೆ ಜಾರಿಗೆ ತಂದಿದ್ದಾರೆ ಎಂದು ಆರೋಪಿಸಿದರು.30*40 ಅಡಿಯ ನಿವೇಶನಕ್ಕೆ ಬಿ ಇಂದ ಎ ಖಾತಾಗೆ ಪರಿವರ್ತನೆ ಮಾಡಲು ಸುಮಾರು 4ರಿಂದ 5 ಲಕ್ಷ ರೂ. ಆಗುತ್ತದೆ. ಇದು ಎಚ್ಎಸ್ಆರ್‌ಬಡಾವಣೆಯಲ್ಲಿ 25 ಲಕ್ಷ ರೂ. ಆಗುತ್ತದೆ. ಈ ರೀತಿ ಜನರಿಗೆ ಹೊರೆ ಹೊರಿಸಿ ಖಜಾನೆ ತುಂಬಿಸಿಕೊಳ್ಳಲು ಮುಂದಾಗಿದ್ದಾರೆ.

**ಎರಡು ವರ್ಷ ಕಾಯಿರಿ:**ಖಾತಾ ಪರಿವರ್ತನೆಗೆ ದುಬಾರಿ ಹಣ ಪಾವತಿಸುವ ಬದಲು ಎರಡು ವರ್ಷ ಕಾಯಿರಿ. ನಮ ಸರ್ಕಾರ ಅಧಿಕಾರಕ್ಕೆ ಬರಲಿದೆ.ಹಿಂದಿನ ವ್ಯವಸ್ಥೆಯಲ್ಲೆ ಸುಲಭವಾಗಿ ನಿಮ ಆಸ್ತಿ ದೊರೆಯಲಿದೆ. ದೀಪಾವಳಿ ಉಡುಗೊರೆಗೆ ಆಸೆ ಬಿದ್ದು ಹಾಳು ಮಾಡಿಕೊಳ್ಳಬೇಡಿ. ಮಾಲೀಕತ್ವ ಸಿಗಲಿದೆ. ಇದರ ಸವಾಲನ್ನು ಸ್ವಿಕಾರ ಮಾಡುತ್ತೆನೆ ಎಂದರು.

ಆಗಿನಿಂದಲೂ ಜನರು ಹಣ ಪಾವತಿಸಿ ನೀರಿನ ಸಂಪರ್ಕವನ್ನು ಪಡೆದುಕೊಂಡಿದ್ದಾರೆ ಎಂದು ಹೇಳಿದರು.

# ಜಿಬಿಎ ರದ್ದು ಅಸಾಧ್ಯ

**ಬೆಂಗಳೂರು, ಅ. 25–** ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ಬರುವುದೂ, ಗ್ರೇಟರ್ ಬೆಂಗಳೂರು ಪ್ರಾಧಿಕಾರ ರದ್ದುಪಡಿಸುವುದು ಅವರ ಹಣೆಯಲ್ಲೇ ಬರೆದಿಲ್ಲ ಎಂದು ಉಪಮುಖ್ಯಮಂತ್ರಿ ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವ ಡಿ.ಕೆ. ಶಿವಕುಮಾರ್ ಹೇಳಿದರು.

ಯಶವಂತಪುರ ವಿಧಾನಸಭಾ ಕ್ಷೇತ್ರದ ಭಾರತ್ ನಗರದ ಗಾಂಧಿ ಮೈದಾನದಲ್ಲಿಂದು ಬೆಂಗಳೂರು ನಡಿಗೆ ಕಾರ್ಯಕ್ರಮದಲ್ಲಿ ಭಾಗಿಯಾಗಿ ಸಾರ್ವಜನಿಕರ ಅಹವಾಲನ್ನು ಸ್ವೀಕರಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ಅಧಿಕಾರಕ್ಕೂ ಬರಲ್ಲ, ಗ್ರೇಟರ್ ಬೆಂಗಳೂರು ಪ್ರಾಧಿಕಾರ ರದ್ದೂ ಆಗಲ್ಲ. ಜಿಬಿಎ ಮುಂದುವರೆಯಲಿದೆ ಎಂದರು.

ಬಿಜೆಪಿ ಅಧಿಕಾರಕ್ಕೆ ಬಂದರೆ ಗ್ರೇಟರ್ ಬೆಂಗಳೂರು ಪ್ರಾಧಿಕಾರವನ್ನು ರದ್ದು ಮಾಡುವುದಾಗಿ ಹೇಳಿರುವುದಕ್ಕೆ ಕಿಡಿಕಾರಿದ ಅವರು, ಬಿಜೆಪಿಯವರು ಅಧಿಕಾರಕ್ಕೆ ಬಂದಾಗ ಏನು ಬೇಕಾದರೂ ಮಾಡಲಿ, ಅವರು ಅಧಿಕಾರಕ್ಕೆ ಬರುವುದು, ಜಿಬಿಎ ರದ್ದುಗೊಳಿಸುವುದು ಸಾಧ್ಯವಿಲ್ಲ ಎಂದು ಹೇಳಿದರು.ಬಿಜೆಪಿಯವರಿಗೆ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಬೇಡವಾದರೆ ಅವರು ಮುಂಬರುವ ಪಾಲಿಕೆ ಚುನಾವಣೆಗಳನ್ನು ಬಹಿಷ್ಕರಿಸಲಿ ಎಂದು ಸವಾಲು ಹಾಕಿದ ಅವರು, ಪಾಲಿಕೆಗೆ ಫೆಬ್ರವರಿ ತಿಂಗಳಿನಲ್ಲಿ ಚುನಾವಣೆ ನಡೆಸಲು ಅಗತ್ಯ ತಯಾರಿ ನಡೆದಿದೆ ಎಂದು ತಿಳಿಸಿದರು.ಬಿಜೆಪಿಯ ಕಾರ್ಯಕರ್ತರೆಲ್ಲಾ ಪಾಲಿಕೆ ಚುನಾವಣೆಯಲ್ಲಿ ಸ್ಪರ್ಧಿಸಲು ಸಿದ್ದರಾಗುತ್ತಿದ್ದಾರೆ. ಬಿಜೆಪಿ ನಾಯಕರು



ಮಾತ್ರ ಜಿಬಿಎ ರದ್ದತಿ ಬಗ್ಗೆ ಮಾತನಾಡುತ್ತಿದ್ದಾರೆ. ಅವರು ಅಧಿಕಾರಕ್ಕೂ ಬರಲ್ಲ, ಜಿಬಿಎ ರದ್ದು ಆಗಲ್ಲ ಎಂದು ಪುನರುಚ್ಚಿಸಿದರು.

ಭಾರತ್ ನಗರ ಸುತ್ತಮುತ್ತಲಿನ ಪ್ರದೇಶಗಳು 25 ವರ್ಷಗಳ ಹಿಂದೆ ಅಭಿವೃದ್ಧಿಯಾಗಿರುವ ಪ್ರದೇಶ. ಇಲ್ಲಿ ಜನದಟ್ಟಣೆ ಹೆಚ್ಚಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ಮಧ್ಯಮ ವರ್ಗದ ಜನ ಇದ್ದಾರೆ. ಅನೇಕ ಮೂಲಭೂತ ಸೌಕರ್ಯ ಸಮಸ್ಯೆಗಳಿವೆ. ನೂರಾರು ಜನ ಬಂದು ಸಮಸ್ಯೆ ಹೇಳಿಕೊಂಡಿದ್ದಾರೆ. ಸಮಸ್ಯೆಗಳ ಪರಿಹಾರದತ್ತ ಗಮನ ಕೊಡುತ್ತೇನೆ. ಮತ್ತೊಂದು ದಿನ ಬಂದು ಜನರಿಗೆ ಸಮಯ ನೀಡುತ್ತೇನೆ ಎಂದು ಅವರು ಹೇಳಿದರು.

# ಆರ್‌ಎಸ್‌ಎಸ್ ಪಥಸಂಚನಕ್ಕೆ ಅನುಮತಿ ನೀಡಬೇಡಿ

**ಕಲಬುರಗಿ,ಅ.25–**ಜಿಲ್ಲೆಯ ಚಿತ್ತಾಪುರ ಪಟ್ಟಣದಲ್ಲಿ ಆರ್‌ಎಸ್‌ಎಸ್ ಸಂಘಟನೆಗೆ ಪಥ ಸಂಚಲನಕ್ಕೆ ಅನುಮತಿ ನೀಡದೇ ಸಾಮಾಜಿಕ ಸ್ವಾಸ್ಥ್ಯ ಕಾಪಾಡುವಂತೆ ಹಾಗೂ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಫೋನ್ ಕಾಲ್ ಮಾಡಿ ಬೆದರಿಕೆ ಹಾಕಿದ ಮತ್ತು ಹಾಕುತ್ತಿರುವ ವ್ಯಕ್ತಿಗಳನ್ನೂ ಕೋಕಾ ಕಾಯ್ದೆ ಅಡಿಯಲ್ಲಿ ಬಂಧಿಸುವಂತೆ ಕೆಪಿಸಿಸಿ ಪದವೀಧರ ವಿಭಾಗದ ಪ್ರಧಾನಕಾರ್ಯದರ್ಶಿ ಹಾಗೂ ನ್ಯಾಯವಾದಿ ಭೀಮನಗೌಡ ಪರಗೊಂಡ ಆಗ್ರಹಿಸಿದ್ದಾರೆ.

ಈ ಸಂಬಂಧ ಜೇವರ್ಗಿ ತಹಶೀಲ್ದಾರ ಅವರ ಮುಖಾಂತರ ಮುಖ್ಯಮಂತ್ರಿ ಹಾಗೂ ಗೃಹ ಸಚಿವರಿಗೆ ಮನವಿಪತ್ರ ಸಲ್ಲಿಸಿರುವ ಅವರು, ಭಾರತ ದೇಶ, ಕರ್ನಾಟಕ ರಾಜ್ಯ, ಕಲಬುರ್ಗಿ ಜಿಲ್ಲೆ ಹಾಗೂ ಚಿತ್ತಾಪುರ ತಾಲ್ಲೂಕು ಮತ್ತು ಚಿತ್ತಾಪುರ ಪಟ್ಟಣ ಬಹುತ್ವದ ಬೀಡಾಗಿದೆ ಮತ್ತು ಸಾಮರಸ್ಯದ ಕೇಂದ್ರವಾಗಿದೆ. ಇಲ್ಲಿ ಹಲವಾರು ಜಾತಿ, ಮತ, ಧರ್ಮ, ಸಂಸ್ಕೃತಿ ಮತ್ತು ಭಾಷೆಯನ್ನು ಮಾತಾಡುವ ಜನರು ಸೌಹಾರ್ದಯುತವಾಗಿ ಬಾಳುವ ಮೂಲಕ ವಿವಿಧತೆಯಲ್ಲಿ ಏಕತೆಯನ್ನು ಎತ್ತಿ ಹಿಡಿದಿದ್ದಾರೆ. ಕಲ್ಯಾಣ ಕರ್ನಾಟಕದ ಕಲಬುರ್ಗಿ ಜಿಲ್ಲೆ ಮತ್ತು ಚಿತ್ತಾಪುರ ಪಟ್ಟಣವು ಶರಣರು, ಸೂಫಿಗಳು, ಸಂತರು ನಡೆದಾಡಿದ ಪುಣ್ಯ ಭೂಮಿ ಆಗಿದೆ. ಚಿತ್ತಾಪುರ ತಾಲ್ಲೂಕು ಅಳ್ಳೊಳ್ಳಿ ನಾಗಪ್ಪಯ್ಯ, ದಂಡಗುಂಡ ಬಸವೇಶ್ವರ, ನಾಲವಾರದ ಕೋರಿಸಿದ್ದೇಶ್ವರರು, ವಾಡಿ ಪಟ್ಟಣದ ಹಜರತ್ ಚೀತಾ ಷಾ ವಾಲಿ ಮತ್ತು ಹಜರತ್ ಪೀರ ಖಾದ್ರಿ ಹಾಗೂ ಚಿತ್ತಾಪುರ ಹೊರವಲಯದ ನಾಗಾವಿ ಯಲ್ಲಮ್ಮ ,ಕೋರವಾರದ ಅಣಿವೀರಭದ್ರೇಶ್ವರರು, ಮೌರ್ಯ ಸಾಮ್ರಾಜ್ಯದ ಸಾಮ್ರಾಟ ಅಶೋಕ ಕಾಲದ ಶಿಲಾ ಶಾಸನ ಇರುವ ಸನ್ನತಿ, ಚಂದ್ರಲಾಂಬ ಪರಮೇಶ್ವರಿ ದೇವಸ್ಥಾನ ಇಂತಹ ಅಸಂಖ್ಯಾತ ಹಿರಿಮೆ ಮತ್ತು ಮಹತ್ವವನ್ನು ತನ್ನ ಒಡಲಿಟ್ಟುಕೊಂಡಿರುವ



ನೆಲದಲ್ಲಿ ಬಲಪಂಥೀಯ ಸಂಘಟನೆಯು ಅಲ್ಲಿಯೇ ಪಥ ಸಂಚಲನ ಮಾಡಲು ಹಠ ಹಿಡಿದಿರುವ ಹಿಂದೆ ಸಾಮರಸ್ಯ ಹಾಗೂ ಸೌಹಾರ್ದ ಕದಡುವ ಸಂಭವ ದಟ್ಟವಾಗಿದೆ. ಇದಕ್ಕೆ ಆಸ್ಪದ ಕೊಡದೇ ಚಿತ್ತಾಪುರ ಅಲ್ಲಿ ಶಾಂತಿ, ಸೌಹಾರ್ದ ಕಾಪಾಡಲು ಆರ್‌ಎಸ್‌ಎಸ್ ಮುಖಂಡರಿಗೆ ಅನುಮತಿ ಕೊಡಬಾರದು ಎಂದು ಅವರು ಮನವಿ ಮಾಡಿದ್ದಾರೆ.

ಆರ್‌ಎಸ್‌ಎಸ್‌ಬಗ್ಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಐಟಿ ಮತ್ತು ಬಿಟಿ ಇಲಾಖೆಯ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಟೀಕೆ ಮಾಡಿದ್ದಕ್ಕೆ ಅವರಿಗೆ ಬೆದರಿಕೆ ಹಾಕುವ ಮೂಲಕ ಅವರ ಧ್ವನಿಯನ್ನು ಕುಗ್ಗಿಸುವ ಪ್ರಯತ್ನ ಆರ್‌ಎಸ್‌ಎಸ್ ಪರ ಒಲವು ಇದ್ದವರು ಮಾಡಿದ್ದಾರೆ ಮತ್ತು ಮಾಡುತ್ತಿದ್ದಾರೆ ಎಂಬುದು ಮೇಲ್ನೋಟಕ್ಕೆ ಕಂಡು ಬರುತ್ತಿದೆ. ಸರ್ಕಾರದ ಜವಾಬ್ದಾರಿಯುತವಾದ ಸಚಿವ ಹುದ್ದೆಯಲ್ಲಿ ಇರುವ ಪ್ರಿಯಾಂಕ್ ಖರ್ಗೆ ಅವರಿಗೆ ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ಮತ್ತು ಸಾಮಾಜಿಕ ಜಾಲತಾಣದ ಮೂಲಕ ಬೆದರಿಕೆ ಹಾಕುತ್ತಿರುವ ವ್ಯಕ್ತಿಗಳ ಬಗ್ಗೆ ಗೃಹ ಇಲಾಖೆ ಕಣ್ಗಾವಲು ಇಡಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಯುವ ಮಾರ್ಗ

ಭಾನುವಾರ 26–10–2025

## ಗಿಲ್ಲೇಸುಗೂರು ಬ್ಲಾಕ್ ಕಾಂಗ್ರೆಸ್ ಪ್ರಚಾರ ಸಮಿತಿಯ ಕಾರ್ಯದರ್ಶಿಯಾಗಿ ವೆಂಕಟೇಶ ನೇಮಕ



**ರಾಯಚೂರು, ಅ.25–** ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರದ ಶಾಸಕರು ಹಾಗೂ ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರಾದ ಬಸನಗೌಡ ದದ್ದಲ ಅವರ ಆದೇಶದ ಮೇರೆಗೆ, ಕಾಂಗ್ರೆಸ್ ಪಕ್ಷದ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಅರೋಲಿ ಗ್ರಾಮದ ವೆಂಕಟೇಶ ನಾಯಕ ಇವರನ್ನು ಗಿಲ್ಲೇಸುಗೂರು ಬ್ಲಾಕ್ ಕಾಂಗ್ರೆಸ್ ಸಮಿತಿಯ ಪ್ರಚಾರ ಸಮಿತಿಗೆ ಕಾರ್ಯದರ್ಶಿಯಾಗಿ ನೇಮಕ ಮಾಡಲಾಗಿದೆ.

ರಾಜ್ಯ ಮತ್ತು ಜಿಲ್ಲಾ ಸಮಿತಿಯ ಮಾರ್ಗದರ್ಶನ ಹಾಗೂ ಸ್ಥಳೀಯ ನಾಯಕರ ಸಹಯೋಗದೊಂದಿಗೆ ಪಕ್ಷದ ಸಂಘಟನೆ ಮತ್ತು ಬಲವರ್ಧನೆಗೆ ಕಾರ್ಯೋನ್ಮುಖರಾಗುವಂತೆ ಅವರಿಗೆ ಸೂಚಿಸಲಾಗಿದೆ.

## ಶರಣ ಧರ್ಮ ಅರಿಯಲು ಚೆನ್ನಬಸವಣ್ಣ ವಚನ ಓದಿ



**ಬೀದರ್,ಅ.25–**ಶರಣ ಧರ್ಮ ಅರಿಯಲು ಚೆನ್ನಬಸವಣ್ಣನವರ ವಚನಗಳನ್ನು ಓದಬೇಕು ಎಂದು ಲಿಂಗಾಯತ ಮಹಾಮಠದ ಪ್ರಭುದೇವ ಸ್ವಾಮೀಜಿ ಹೇಳಿದರು.

ಲಿಂಗಾಯತ ಮಹಾಮಠದ ವತಿಯಿಂದ ಇಲ್ಲಿಯ ಬಸವಗಿರಿಯಲ್ಲಿ ಈಚೆಗೆ ನಡೆದ 268ನೇ ಮಾಸಿಕ ಶರಣ ಸಂಗಮ ಹಾಗೂ ಚಿನ್ಮಯ ಜ್ಞಾನಿ ಚೆನ್ನಬಸವಣ್ಣನವರ ಜಯಂತಿ ಆಚರಣೆ ಕಾರ್ಯಕ್ರಮದ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ಚೆನ್ನಬಸವಣ್ಣನವರ ವಚನಗಳು ಬಸವ ಪ್ರಣೀತ ಲಿಂಗಾಯತಕ್ಕೆ ತಾತ್ವಿಕತೆ ಸಾರುತ್ತವೆ ಎಂದು ತಿಳಿಸಿದರು.

ಚೆನ್ನಬಸವಣ್ಣನವರ ಹೆಸರೇ ರೋಮಾಂಚನ. ಚೆನ್ನಬಸವಣ್ಣನವರನ್ನು ಬಸವಣ್ಣನವರು ಬಿತ್ತದೆ ಬೆಳೆಯದೆ, ಬೆಳೆದ ಹೆಬ್ಬೆಳಸಿನ ರಾಶಿ ಎಂದು ಬಣ್ಣಿಸಿದ್ದಾರೆ ಎಂದು ಹೇಳಿದರು.

ಕಿರಿಯ ವಯಸ್ಸಿನಲ್ಲಿಯೇ ಅಪಾರ ಜ್ಞಾನವಂತರಾಗಿ ಅನುಭವ ಮಂಟಪದಲ್ಲಿ ಮಿಂಚಿದರು. ಹುಟ್ಟುತ್ತಲೇ ಪರಿಮಳ ಬೀರಿದ ಅವರು ಅಲ್ಲಮರ ಆಗಮನ, ಸಿದ್ಧರಾಮರ ಇಷ್ಟಲಿಂಗ ದೀಕ್ಷೆಯಂತಹ ಮಹತ್ವದ ಪ್ರಸಂಗಗಳನ್ನು ಚಾಕಚಕ್ಯತೆಯಿಂದ ನಿಭಾಯಿಸಿ ಸೈ ಎನಿಸಿಕೊಂಡರು ಎಂದು ತಿಳಿಸಿದರು.

ವಯಸ್ಸಿನಲ್ಲಿ ತನಗಿಂತ ಹಿರಿಯರಾದ ಸೊನ್ನಲಾಪುರದ ಸಿದ್ಧರಾಮರಿಗೆ ದೀಕ್ಷೆ ನೀಡಿದ್ದು ಅವರ ಆಧ್ಯಾತ್ಮದ ಎತ್ತರಕ್ಕೆ ಸಾಕ್ಷಿಯಾಗಿದೆ. ಬಸವಣ್ಣನವರ ಹೆಗಲೆಣೆಯಾಗಿ ಕಲ್ಯಾಣ ಕ್ರಾಂತಿಯಲ್ಲಿ ಮಹತ್ವದ ಪಾತ್ರ ವಹಿಸಿದ್ದರು. ಚನ್ನಬಸವಣ್ಣ ಯುವ ಪೀಳಿಗೆಗೆ ಆದರ್ಶ ಎಂದು ಹೇಳಿದರು.

ಬೀದರ್ ವಿಶ್ವವಿದ್ಯಾಲಯದ ಕನ್ನಡ ವಿಭಾಗದ ಮುಖ್ಯಸ್ಥ ಡಾ. ರಾಮಚಂದ್ರ ಗಣಾಪುರ ಮಾತನಾಡಿ, ಚನ್ನಬಸವಣ್ಣ ಶರಣ ಪರಂಪರೆಯ ಮಹಾ ಜ್ಞಾನಿ. ಸಕಲ ಜೀವಾತ್ಮರಿಗೆ ಲೇಸನ್ನೇ ಬಯಸಿದ ಶರಣ ಧರ್ಮಕ್ಕೆ ತಾರ್ತಿಕ, ವೈಚಾರಿಕ ಹಾಗೂ ವೈಜ್ಞಾನಿಕ ನೆಲೆಗಟ್ಟು ಒದಗಿಸಿಕೊಟ್ಟವರು ಅವರು ಎಂದು ತಿಳಿಸಿದರು.

ಚನ್ನಬಸವಣ್ಣ ಅವರನ್ನು ಷಟ್‌ಸ್ಥಲ ಜ್ಞಾನಿ ಎಂದು ಕರೆಯಲಾಗುತ್ತದೆ. ಅವರ ವಚನಗಳಲ್ಲಿ ಆಧ್ಯಾತ್ಮ ಸಾಧನೆಯ ಆರು ಮೆಟ್ಟಿಲುಗಳಾದ ಆರು ಸ್ಥಲಗಳ ಬಣ್ಣನೆ ಇದೆ ಎಂದು ಹೇಳಿದರು.

ಚನ್ನಬಸವಣ್ಣನವರು ಕೂಡಲಚನ್ನಸಂಗಮದೇವ ವಚನಾಂಕಿತದಿಂದ ಬರೆದ 1,776 ವಚನಗಳು ಮನುಕುಲದ ಬೆಳಕಾಗಿವೆ. ಕಲ್ಯಾಣ ಕ್ರಾಂತಿಯ ಕೊನೆಯ ಘಟ್ಟದಲ್ಲಿ ವಚನ ಸಂರಕ್ಷಣೆಯಲ್ಲಿ ಅವರು ಪ್ರಮುಖ ಪಾತ್ರ ವಹಿಸಿದರು ಎಂದು ತಿಳಿಸಿದರು.

ಇಂದು ನಮಗೆ ವಚನಗಳು ಲಭ್ಯವಾಗಲು ಚೆನ್ನಬಸವಣ್ಣನವರ ಸಮರ್ಥ ಮಾರ್ಗದರ್ಶನವೇ ಕಾರಣ ಎಂದು ಹೇಳಿದರು.

ಚೆನ್ನಬಸವಣ್ಣನವರು ತಮ್ಮ ವಚನಗಳ ಮೂಲಕ ಇಂದಿಗೂ ಜೀವಂತವಾಗಿದ್ದಾರೆ. ಅವರ ಜಯಂತಿ ಆಚರಿಸುವುದೆಂದರೆ ಅವರ ಆದರ್ಶಗಳನ್ನು ನೆನೆದು, ಅವರ ವಚನಗಳಂತೆ ಬದುಕಲು ಪ್ರೇರಣೆ ಪಡೆಯುವುದು ಎಂದು ತಿಳಿಸಿದರು.

ಚರಜಂಗಮ ಸಿದ್ರಾಮಪ್ಪ ಕಪಲಾಪುರೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಗಣಿತದಲ್ಲಿ ಪಿ.ಎಚ್‌ಡಿ ಪಡೆದು ಪುಣೆಯಲ್ಲಿ ಸಹಾಯಕ ಪ್ರಾಧ್ಯಾಪಕರಾಗಿರುವ ಡಾ. ಪ್ರದೀಪಕುಮಾರ ಜ್ಯಾಂತೆ, ನೀಟ್‌ನಲ್ಲಿ ಉತ್ತಮ ರ್‍ಯಾಂಕ್ ಗಳಿಸಿ, ಎಂ.ಬಿ.ಬಿ.ಎಸ್. ಪ್ರವೇಶ ಪಡೆದ ಶ್ರೇಯಾ ಉದಯ ಪಾಟೀಲ, ಲಿಂಗಾಯತ ಸೇವಾ ದಳದ ಗೋರ್ಟಾ ಶಾಖೆ ಅಧ್ಯಕ್ಷರಾಗಿ ಆಯ್ಕೆಯಾದ ಸುಪ್ರೀತ್ ಪತಂಗೆ ಅವರನ್ನು ಅಭಿನಂದಿಸಿ, ಶಾಲು ಹೊದಿಸಿ, ಸ್ಮರಣಿಕೆ ನೀಡಿ ಗೌರವಿಸಲಾಯಿತು.

# ಶ್ರೀ ಅಂಬಿಗರ ಚೌಡಯ್ಯ ಹಾಗೂ ಡಿ ದೇವರಾಜು ಅರಸು ಪುತ್ಥಳಿ ಸ್ಥಳಕ್ಕೆ ಸಚಿವ ಎನ್‌ಎಸ್ ಬೋಸರಾಜು ಭೇಟಿ



ಯುವ ಮಾರ್ಗ ಸುದ್ದಿ

**ರಾಯಚೂರು,ಅ.25–**12ನೇ ಸಾಲಿನ ಸಮ–ಸಮಾನತೆಯ ಕಲ್ಯಾಣಕ್ಕಾಗಿ ಶ್ರಮಿಸಿದ, ವಿಶ್ವಗುರು ಬಸವಣ್ಣ ಅವರ ಅನುಯಾಯಿಗಳಾದ ಶ್ರೀ ಅಂಬಿಗರ ಚೌಡಯ್ಯ ಅವವರ ನೂತನ ಪುತ್ಥಳಿ ನಿರ್ಮಾಣ ಸ್ಥಳಕ್ಕೆ ಹಾಗೂ ಹಿಂದುಳಿದ ವರ್ಗದ ನಾಯಕರು, ನಾಡುಕಂಡ ಶ್ರೇಷ್ಠ ಮುಖ್ಯಮಂತ್ರಿಗಳಾಗಿ ಸೇವೆ ಸಲ್ಲಿಸಿದ ದಿ. ಡಿ ದೇವರಾಜ್ ಅರಸು ಅವರ ಪುತ್ತಳಿ ನಿರ್ಮಾಣ ಸ್ಥಳಕ್ಕೆ ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಸಚಿವರಾದ ಎನ್ ಎಸ್ ಬೋಸರಾದರು ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ರಾಯಚೂರು ನಗರದ ಬಿ ಆರ್ ಬಿ ವೃತ್ತದಲ್ಲಿ ನಿರ್ಮಾಣವಾಗುತ್ತಿರುವ ಶ್ರೀ ಅಂಬಿಗರ ಚೌಡಯ್ಯ ಪುತ್ತಳಿ ಸ್ಥಳಕ್ಕೆ ಹಾಗೂ ಸ್ಟೇಷನ್ ರಸ್ತೆಯಲ್ಲಿ ನಿರ್ಮಾಣವಾಗುತ್ತಿರುವ ದಿ.ಡಿ ದೇವರಾಜು ಅರಸು ಅವರ ಪುತ್ತಳಿ ನಿರ್ಮಾಣ ಸ್ಥಳಕ್ಕೆ ಮಹಾನಗರ ಪಾಲಿಕೆ ಮಾಹಾ ಪೌರರೊಂದಿಗೆ ಭೇಟಿ ನೀಡಿ ವೀಕ್ಷಣೆ ಮಾಡಿದರು.

ಸಮ ಸಮಾಜ ನಿರ್ಮಾಣ ಮಾಡಲು ಹಾಗೂ ಸಮಾಜದಲ್ಲಿರುವ ಮೂಢನಂಬಿಕೆ, ಕಂದಾಚಾರಗಳನ್ನು ಹೋಗಲಾಡಿಸಲು ವಚನ ಸಾಹಿತ್ಯದ ಮೂಲಕ 12ನೇ ಶತಮಾನದಲ್ಲಿ ಕ್ರಾಂತಿ ಮಾಡಿದ ಮಹಾನ್ ನಾಯಕರ ವಿಚಾರಧಾರಡಗಳನ್ನು ಮೈಗೂಡಿಸಿಕೊಂಡು ನಾವೆಲ್ಲರೂ ಸ್ಫೂರ್ತಿಯಾಗಿ ತೆಗೆದುಕೊಳ್ಳಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಮಹಾಪೌರರಾದ ನರಸಮ್ಮ ನರಸಿಂಹಲು ಮಾಡಗಿರಿ, ಉಪ ಮಹಾಪೌರರಾದ ಸಾಜಿದ್ ಸಮೀರ್, ಹಿರಿಯರಾದ ಜಯಣ್ಣ, ಕೆ ಶಾಂತಪ್ಪ, ಮೊಹ್ಮದ್ ಶಾಲಂ, ಶಿವಮೂರ್ತಿ, ರುದ್ರಪ್ಪ ಅಂಗಡಿ, ತಿಮ್ಮಾರೆಡ್ಡಿ, ಬಿ ರಮೇಶ್, ಶಾಮ್ ಸುಂದರ್, ರಸೂಲ್ ಸಾಬ್, ಅಫ್ಜಲ್ ನಾಯಕ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಸಿರವಾರ: ಸಚಿವ, ಶಾಸಕರಿಂದ 3.85 ಕೋಟಿ ವೆಚ್ಚದ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ

## ಕಾಮಗಾರಿಗಳನ್ನು ಗುಣಮಟ್ಟದಿಂದ ನಿರ್ವಹಿಸಿ ಸಚಿವ ಬೋಸರಾಜು



ಯುವ ಮಾರ್ಗ ಸುದ್ದಿ

**ಸಿರವಾರ, ಅ.24–** ರಾಜ್ಯ ಕಾಂಗ್ರೆಸ್ ಸರ್ಕಾರದ ಗ್ಯಾರೆಂಟಿ ಯೋಜನೆಗಳ ಅನುಷ್ಠಾನದ ಜೊತೆಗೆ ಅಭಿವೃದ್ಧಿಗೆ ಆಧ್ಯತೆ ನೀಡಲಾಗುತ್ತಿದೆ ಗ್ಯಾರೆಂಟಿ ಯೋಜನೆಗಳಿಂದ ಅಭಿವೃದ್ಧಿ ಕೆಲಸಗಳು ಆಗುತ್ತಿವೆಂಬ ವಿರೋಧ ಪಕ್ಷಗಳ ಟೀಕೆಗಳಿಗೆ ಈ ಮೂಲಕ ತಕ್ಕ ಉತ್ತರ ನೀಡುತ್ತೇವೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ಸಚಿವರಾದ ಎನ್.ಎಸ್.ಬೋಸರಾಜು ಹೇಳಿದರು.

ಶುಕ್ರವಾರ ಸಿರವಾರ ತಾಲೂಕಿನಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿ ನಂತರ ಅವರು ಮಾತನಾಡಿದರು, ಜನರು ವಿರೋಧ ಪಕ್ಷದವರ ಟೀಕೆಗಳಿಗೆ ಕಿವಿಗೊಡಬಾರದು ಗ್ಯಾರೆಂಟಿ ಯೋಜನೆಗಳಿಂದ ರಾಜ್ಯದಲ್ಲಿ ಅಭಿವೃದ್ಧಿ ಕೆಲಸಗಳಿಗೆ ಯಾವುದೇ ತೊಂದರೆ ಇಲ್ಲ, ಗ್ಯಾರೆಂಟಿ ಯೋಜನೆಗಳು ನಿಲ್ಲುವುದಿಲ್ಲ, ಅಭಿವೃದ್ಧಿ ಕೆಲಸಗಳಿಗೂ ತೊಂದರೆ ಇಲ್ಲ ಎಲ್ಲಾವೂ ಎಲ್ಲವನ್ನೂ ಸರಿದೂಗಿಸಿಕೊಂಡು ಅಭಿವೃದ್ಧಿ ಕೆಲಸಗಳು ನಡೆಯುತ್ತಿವೆ ರಾಜ್ಯದಲ್ಲಿ ಸರ್ವ ಜನಾಂಗದ, ಸರ್ವ ದರ್ಮಗಳ ಹಿತ ಕಾಪಾಡುವ ಸರ್ಕಾರ ಇದ್ದರೆ ಅದು ಕಾಂಗ್ರೆಸ್ ಸರ್ಕಾರದಿಂದ ಮಾತ್ರ ಸಾಧ್ಯ ಸರ್ವರ ಕಲ್ಯಾಣ ಸರ್ಕಾರದ ಧ್ಯೇಯವಾಗಿದೆ ಎಂದರು.

ಶಾಸಕ ಜಿ.ಹಂಪಯ್ಯ ನಾಯಕ ಮಾತನಾಡಿ ಮಾನ್ವಿ ಕ್ಷೇತ್ರ ಸಿರವಾರ ಹಾಗೂ ಮಾನ್ವಿ ತಾಲೂಕುಗಳಲ್ಲಿ ನಾವು ಜನರಿಗೆ ಬೀಡಿದ ಭರವಸೆಗಳನ್ನು ಈಡೇರಿಸುತ್ತಿದ್ದೇವೆ ನಾವು ಕೊಟ್ಟ ಮಾತಿಗೆ ತಪ್ಪುವವರು ಅಲ್ಲ ನುಡಿದಂತೆ ನಡೆಯುತ್ತಿದ್ದೇವೆ ಸಿರವಾರಕ್ಕೆ ಕ್ರೀಡಾಂಗಣ, ಪ್ರಜಾಸೌಧ, ಅಗ್ನಿ ಶಾಮಕ ಠಾಣೆ ನಾವು ಭರವಸೆ ಕೊಟ್ಟಿದ್ದೇವೆ ಅದರಂತೆ ನಾವು ಕೊಟ್ಟ ಭರವಸೆಗಳನ್ನು ಈಡೇರಿಸುತ್ತಿದ್ದೇವೆ ಇನ್ನೂ ಸಾಕಷ್ಟು ಅಭಿವೃದ್ಧಿ ಕೆಲಸಗಳು ಆಗಬೇಕು ಅದಕ್ಕಾಗಿ ನಾನು ನಮ್ಮ ರಾಜಕೀಯ ಗುರುಗಳು ಸಚಿವರಾದ ಬೋಸರಾಜು ಅವರು ಸತತ ಪಯತ್ನ ಮಾಡುತ್ತಿದ್ದೇವೆ ಕ್ಷೇತ್ರದ ಜನರು ಸಹಕಾರ ನೀಡಬೇಕೆಂದರು.

ಈ ಸಂದರ್ಭದಲ್ಲಿ ತಹಶೀಲ್ದಾರರಾದ ಅಶೋಕ ಪವಾರ್, ಮುಖಂಡರಾದ ಚುಕ್ಕಿ ಸೂಗಪ್ಪ ಸಾಹುಕಾರ್, ಶರಣಯ್ಯ ನಾಯಕ ಗುಡದಿನ್ನಿ, ಬ್ರಿಜೇಶ ಪಾಟೀಲ್, ಮಹಿಳಾ ಕಾಂಗ್ರೆಸ್ ಅದ್ಯಕ್ಷರಾದ ನಿರ್ಮಲಾ ಬೆಣ್ಣಿ, ಶಿವಕುಮಾರ ಚುಕ್ಕಿ, ದಾನನಗೌಡ, ಅರಕೇರಿ ಶಿವಶರಣ ಸಾಹುಕಾರ್, ರಮೇಶ ದರ್ಶನಕರ್, ಹಿರಿಯರಾದ ರುದ್ರಪ್ಪ ಅಂಗಡಿ, ಹಸನ್ ಅಲೀ, ಹೆಚ್ ಕೆ ಅಮರೇಶ, ನಾಗಪ್ಪ, ದುರುಗಣ್ಣ ನಾಯಕ, ನಾಗರಾಜ, ಬಸವರಾಜ ಕಲ್ಲೂರು, ಜೆ.ಅಬ್ರಹಾಂ ಹೊನ್ನಟಗಿ, ಡಿ.ಜಯಪ್ಪ, ವಾಸು ಬಾಬು, ಸುಬ್ಬರಾವ್, ರಡ್ಡೆಪ್ಪ ತಾಂಡ, ಅಮರೇಶ ತಾಯಣ್ಣ ನಾಯ್ಕ ಸೇರಿದಂತೆ ಅನೇಕರು ಇದ್ದರು.

# ನಿರ್ಗತಿಕರ ಮಕ್ಕಳಿಗೆ ಕಲಿಕಾ ಪರಿಕರಗಳ ವಿತರಣೆ: ಚಂದ್ರಶೇಖರ.ಜಿ

ಯುವ ಮಾರ್ಗ ಸುದ್ದಿ

**ಮಾನ್ವಿ,ಅ.25–** ಪಟ್ಟಣದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗಾಮೀಣ ಅಭಿವೃದ್ಧಿ ಟ್ರಸ್ಟ್ ವತಿಯಿಂದ ನಡೆದ ವಾತ್ಸಲ್ಯ ವಿದ್ಯಾರ್ಜನೆ ವಿದ್ಯಾನಿಧಿ ಅಡಿಯಲ್ಲಿ ನಿರ್ಗತಿಕರ ಮಕ್ಕಳಿಗೆ ಕಲಿಕಾ ಪರಿಕರಗಳ ವಿತರಣೆ ಕಾರ್ಯಕ್ರಮದಲ್ಲಿ ನಿರ್ಗತಿಕರ ಮಕ್ಕಳಿಗೆ ಕಲಿಕಾ ಪರಿಕರಗಳನ್ನು ವಿತರಿಸಿ ಶ್ರೀ ಕ್ಷೇತ್ರ ಧರ್ಮಸ್ಥಳ ಗಾಮೀಣ ಅಭಿವೃದ್ಧಿ ಟ್ರಸ್ಟ್ ನ ಕಲ್ಯಾಣ ಕರ್ನಾಟಕ ಪ್ರದೇಶ ನಿರ್ದೇಶಕರಾದ ಚಂದ್ರಶೇಖರ.ಜಿ. ಕೊಪ್ಪಳ ಮಾತನಾಡಿ, ಶ್ರೀ ಕ್ಷೇತ್ರ ಧರ್ಮಸ್ಥಳ ವತಿಯಿಂದ ಕೃಷಿಕರಿಗಾಗಿ ಅಧುನಿಕ ಕೃಷಿಯ ಪರಿಚಯ. ಕೃಷಿಯಲ್ಲಿ ಹೆಚ್ಚಿನ ಲಾಭಕ್ಕಾಗಿ ರೈತರಿಗೆ ಹೈನುಗಾರಿಕೆ,ಜಾನುವಾರು ಸಾಕಣಿಕೆಗಾಗಿ ತರಬೇತಿ ನೀಡಲಾಗುತ್ತಿದೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ 20ಸಾವಿರಕ್ಕೂ ಹೆಚ್ಚು ನಿರ್ಗತಿಕರನ್ನು ಗುರುತಿಸಿ ಅವರಿಗೆ ಅಗತ್ಯವಿರುವ ಸೌಲಭ್ಯಗಳನ್ನು ಕಲ್ಪಿಸುವುದರ ಜೊತೆಗೆ ವಾತ್ಸಲ್ಯ ಕೀಟ್‌ಗಳ ವಿತರಣೆ, ಮಾಶಸಾನವನ್ನು ನೀಡಲಾಗುತ್ತಿದೆ. ಜೊತೆಗೆ ಮನೆಗಳಿಲ್ಲದೆ ಬೀದಿಗಳಲ್ಲಿ ವಾಸ ಮಾಡುತ್ತಿರುವ 670 ಜನರಿಗೆ ಉಚಿತವಾಗಿ ಮನೆಗಳನ್ನು ನಿರ್ಮಾಣ ಮಾಡಿ ನೀಡಲಾಗಿದೆ ಹಾಗೂ ನಿರ್ಗತಿಕರ ಕುಟುಂಬದಲ್ಲಿನ ಮಕ್ಕಳಿಗೆ ವಿದ್ಯಾನಿಧಿಯೋಜನೆಯಡಿಯಲ್ಲಿ ಶಿಕ್ಷಣಕ್ಕೆ ಅಗತ್ಯವಿರು ಶಾಲಾ ಬ್ಯಾಗ್,ಪುಸ್ತಕ, ಸೇರಿದಂತೆ ಕಲಿಕಾ ಪರಿಕರಗಳನ್ನು ಕೂಡ ನೀಡಲಾಗುತ್ತಿದೆ. ಆರೋಗ್ಯ ಸೌಕರ್ಯಗಳನ್ನು ಕೂಡ ನೀಡಲಾಗುತ್ತಿದೆ. ಹಾಗೂ ಸರ್ಕಾರದ ಸೌಲಭ್ಯಗಳನ್ನು ಪಡೆಯುವುದಕ್ಕೆ ಅಗತ್ಯ ದಾಖಲೆಗಳಿಲ್ಲದೆ ಸೌಲಭ್ಯ ವಂಚಿತರಿಗೆ ಕೂಡ ಅವರಿಗೆ ಅಗತ್ಯವಿರುವ ಸೌಲಭ್ಯಗಳನ್ನು ನಮ್ಮ ಸಂಸ್ಥೆವತಿಯಿಂದ ನೀಡಲಾಗುತ್ತಿದೆ ಎಂದು ತಿಳಿಸಿದರು.



ನಿರ್ಗತಿಕ ಮಕ್ಕಳಿಗೆ ಶಿಕ್ಷಣಕ್ಕೆ ಅಗತ್ಯವಿರುವ ಕಲಿಕಾಪರಿಕರಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗಾಮೀಣ ಅಭಿವೃದ್ಧಿ ಟ್ರಸ್ಟ್ ರಾಯಚೂರು ಜಿಲ್ಲಾ ನಿರ್ದೇಶಕರಾದ ಮೋಹನ್ ನಾಯಕ, ವಲಯ ಮೇಲ್ವಿಚಾರಕರಾದ ಮರಾಠೆ.ಜಿ. ರವೀಂದ್ರ, ಮೈಲಾರಿ, ಜ್ಞಾನ ವಿಕಾಶ ಸಮನ್ವಾಯಾಧಿಕಾರಿ ಜ್ಯೋತಿ ಬಿ.ಪಾಟೀಲ್, ಚೆನ್ನಮ್ಮ, ತಾ.ವಲಯ ನಿರ್ದೇಶಕರಾದ ಸುನೀತಾ, ಸೇರಿದಂತೆ ವಿವಿಧ ವಲಯಗಳ ಸೇವಾಪ್ರತಿನಿಧಿಗಳು ಮತ್ತು ಒಕ್ಕೂಟದ ಪದಾಧಿಕಾರಿಗಳು ಇದ್ದರು.

## ಹುಟ್ಟುಹಬ್ಬದ ದಿನವೇ ಯುವಕ ಸಾವು, ಅಂಗಾಂಗ ದಾನ ಮಾಡಿ ಸಾರ್ಥಕತೆ ಮೆರೆದ ಪೋಷಕರು



**ಕೊಪ್ಪಳ,ಅ.25–** ಅಪಘಾತಕ್ಕಿಡಾಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಯುವಕನೊಬ್ಬ ಹುಟ್ಟುಹಬ್ಬದ ದಿನವೇ ಮೃತಪಟ್ಟಿದ್ದು, ಪೋಷಕರು ಕೇಕ್ ಕತ್ತರಿಸಿ ಅಂಗಾಂಗ ದಾನ ಮಾಡಿ ಸಾರ್ಥಕತೆ ಮೆರೆದಿದ್ದಾರೆ.

ಕನಕಗಿರಿ ಮೂಲದ ಆರ್ಯನ್ (22) ಮೃತಪಟ್ಟ ಯುವಕ. ಕಳೆದ 15 ದಿನಗಳ ಹಿಂದೆ ಹಾಸನ ಸಮೀಪ ಸಂಭವಿಸಿದ ಬೈಕ್ ಅಪಘಾತದಲ್ಲಿ ಆರ್ಯನ್ ಗಂಭೀರವಾಗಿ ಗಾಯಗೊಂಡಿದ್ದು, ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿತ್ತು.

ಆದರೆ, ಚಿಕಿತ್ಸೆ ಫಲಕಾರಿಯಾಗದೆ ಹುಟ್ಟುಹಬ್ಬದ ದಿನವಾದ ಶುಕ್ರವಾರ ಆರ್ಯನ್ ಮೃತಪಟ್ಟಿದ್ದಾನೆ. ಪೋಷಕರು ದುಃಖದ ನಡುವೆಯೇ ಮಗನ ಕೈ ಹಿಡಿದು ಕೇಕ್ ಕತ್ತರಿಸಿ ಕಣ್ಣೀರಿಟ್ಟಿದ್ದಾರೆ. ಬಳಿಕ ಮಗನ ಅಂಗಾಂಗ ದಾನ ಮಾಡಿ ಸಾರ್ಥಕತೆ ಮೆರೆದಿದ್ದಾರೆ.

ಬೆಳೆದ ಪುತ್ರ ಕಣ್ಣಮುಂದೆಯೇ ಸಾವನ್ನಪ್ಪಿದ್ದು, ಪೋಷಕರಲ್ಲಿ ದುಃಖದ ಕಟ್ಟೆ ಒಡೆದಿತ್ತು. ಆದರೂ ಸಹ ಇನ್ನೊಬ್ಬರಿಗೆ ನೆರವಾಗಲೆಂದು ಅಂಗಾಂಗ ದಾನ ಮಾಡಿ ಪ್ರಶಂಸೆಗೆ ಪಾತ್ರರಾಗಿದ್ದಾರೆ.

# 4.22 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು

**ಕಲಬುರಗಿ,ಅ.25–**ಮನೆ ಬೀಗ ಮುರಿದು 4.22 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು ಮಾಡಿರುವ ಘಟನೆ ಹಾಗರಗಾ ರಸ್ತೆಯ ಫಿರದೋಶ ಕಾಲೋನಿಯಲ್ಲಿ ನಡೆದಿದೆ.

ಖಾಜಾ ಮೈನೊದ್ದಿನ್ ಎಂಬುವವರ ಮನೆ ಬೀಗ ಮುರಿದು ಕಳ್ಳರು 60 ಸಾವಿರ ರೂ.ಮೌಲ್ಯದ 10 ಗ್ರಾಂ.ಬಂಗಾರದ ನೆಕ್ಲೆಸ್, 30 ಸಾವಿರ ರೂ.ಮೌಲ್ಯದ 5 ಗ್ರಾಂ.ಒಂದು ಜೊತೆ ಬಂಗಾರದ ಕಿವಿಯಲ್ಲಿನ ರಿಂಗ್, 12 ಸಾವಿರ ರೂ.ಮೌಲ್ಯದ 2 ಗ್ರಾಂ.ಬಂಗಾರದ ಉಂಗುರ, 10 ಸಾವಿರ ರೂ.ಮೌಲ್ಯದ 20 ತೊಲೆ ಬೆಳ್ಳಿ ಕಾಲು ಚೈನಾ, 3.10 ಲಕ್ಷ ರೂ.ನಗದು ಸೇರಿ 4.22 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು ಮಾಡಿದ್ದಾರೆ.

ಖಾಜಾ ಮೈನೊದ್ದಿನ್ ಅವರು ಮನೆಗೆ ಬೀಗ ಹಾಕಿಕೊಂಡು ಪತ್ನಿ, ಮಗನ ಜೊತೆಗೆ ಹೈದ್ರಾಬಾದ್‌ಗೆ ಹೋದ ಸಂದರ್ಭದಲ್ಲಿ ಮನೆ ಕಳ್ಳತನವಾಗಿದೆ ಎಂದು ತಿಳಿದುಬಂದಿದೆ.

ಈ ಸಂಬಂಧ ವಿಶ್ವವಿದ್ಯಾಲಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

## ಸೆಂಟರ್ ಆಫ್ ಇಂಡಿಯಾನ್ ಟ್ರೇಡ್ ಯೂನಿಯನ್ಸ್ ನೂತನ ಜಿಲ್ಲಾ ಪದಾಧಿಕಾರಿಗಳ ಆಯ್ಕೆ

**ಮಾನ್ವಿ,ಅ.25–** ಪಟ್ಟಣದ ನ್ಯೂ ಫ್ರೆಂಡ್ಸ್ ಫಂಕ್ಷನ್ ಹಾಲ್‌ನಲ್ಲಿ ರಾಯಚೂರು ಸೆಂಟರ್ ಆಫ್. ಇಂಡಿಯಾನ್ ಟ್ರೇಡ್ ಯೂನಿಯನ್ಸ್ ಎಂಟನೇ ಜಿಲ್ಲಾ ಮಟ್ಟದ ಸಮ್ಮೇಳನದಲ್ಲಿ ಮೂರು ವರ್ಷಗಳ ಅವಧಿಗೆ ಜಿಲ್ಲಾ ಘಟಕಕ್ಕೆ ನೂತನ ಪದಾಧಿಕಾರಿಗಳ ಆಯ್ಕೆ ನಡೆಯಿತು ಜಿಲ್ಲಾಧ್ಯಕ್ಷರಾಗಿ ಕಾಂ. ಹೆಚ್. ಪದ್ಮಾ,ಉಪಾಧ್ಯಕ್ಷರಾಗಿ ವರಲಕ್ಷ್ಮಿ ??, ಪ್ರವೀಣರೆಡ್ಡಿ,ಗಿರಿಯಪ್ಪ.ಪಿ, ಕಾಂ. ಹೆಚ್. ಶರ್ಪುದ್ದೀನ್ ಪೋತ್ನಾಳ್,ಯಂಕಪ್ಪ.ಕೆ,ರೇಣುಕಮ್ಮ, ವೆಂಕೋಬ ಮಿಯಾಪುರ, ಮೈನುದ್ದೀನ್, ಜಿಲ್ಲಾ ಪ್ರ.ಕಾರ್ಯದರ್ಶಿಯಾಗಿ ಡಿ.ಎಸ್.ಶರಣಬಸವ, ಸಹಕಾರ್ಯದರ್ಶಿಯಾಗಿ ಮಲ್ಲಿಕಾರ್ಜುನ ಮನ್ಸಾಲಪುರ, ಮರಿಯಮ್ಮ, ರಮಾ, ರುದ್ರಪ್ಪ ನಾಯಕ, ಆನ್ವರ್ ಪಾಷಾ, ರಮೇಶ ವೀರಾಪುರ್, ಹನೀಫ್ ಹಬ್ಬಿ, ಲಿಂಗಪ್ಪ ವೀರಾಪುರ,ವಿಶೇಷ ಆಹ್ವಾನಿತರಾಗಿ ಕಾಂ.ಶಫಿ.ಎಸ್.ಎಂ., ಖಜಾಂಚಿ ಶಿಬ್ಬೀರ್ ಜಾಲಹಳ್ಳಿ, ಯವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು.

## ಸಿಡ್ನಿಯಲ್ಲಿ ವಿಂಟೇಜ್ ರೋ–ಕೋ! ಭಾರತಕ್ಕೆ 9 ವಿಕೆಟ್‌ಗಳ ಭರ್ಜರಿ ಜಯ



**ಸಿಡ್ನಿ,ಅ.24–** ಎಸ್‌ಸಿಜಿಯಲ್ಲಿ ರೋಹಿತ್ ಶರ್ಮಾ ಮತ್ತು ವಿರಾಟ್ ಕೊಹ್ಲಿ ಅದ್ಭುತ ಪ್ರದರ್ಶನದಿಂದ ಆಸ್ಟ್ರೇಲಿಯಾ ವಿರುದ್ಧದ ಮೂರನೇ ಏಕದಿನ ಪಂದ್ಯದಲ್ಲಿ ಭಾರತ ಒಂಬತ್ತು ವಿಕೆಟ್‌ಗಳ ಜಯ ಸಾಧಿಸಿತು. ರೋಹಿತ್ ಶರ್ಮಾ ಅಜೇಯ 121 ರನ್‌ಗಳೊಂದಿಗೆ ತಮ್ಮ 50 ನೇ ಅಂತರರಾಷ್ಟ್ರೀಯ ಶತಕವನ್ನು ಗಳಿಸಿದರು, ಕೊಹ್ಲಿ ಅಜೇಯ 74 ರನ್ ಗಳಿಸಿದರು. ಇಬ್ಬರು ಮುರಿಯದ 168 ರನ್‌ಗಳ ಪಾಲುದಾರಿಕೆಯು ಗೆಲುವನ್ನು ಖಚಿತಪಡಿಸಿತು,

ಆಸ್ಟ್ರೇಲಿಯಾ ಈಗಾಗಲೇ ಮೂರು ಪಂದ್ಯಗಳ ಸರಣಿಯನ್ನು ಗೆದ್ದಿದ್ದರೂ, ರೋ–ಕೋ ಅದ್ಭುತ ಪ್ರದರ್ಶನ ನೀಡುವೂ ಮೂಲಕ ಟೀಕಕಾರರ ಬಾಯಿ ಮುಚ್ಚಿಸಿದರು.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H